ಹೊಸ ನಾವಿಕ

ಸ್ಥಾಪನೆ -2010

RNI - KARKAN/2010/32092
Post. Reg No. KA/SK/SMG-1210/2025-27
e-mail: hosanavika@gmail.com
Website: www.hosanavika.com
WhatsApp: 948 248 2182

HOSA NAVIKA KANNADA DAILY EVENING NEWS PAPER

● ಸಂಪುಟ: 17 ● ಸಂಚಿಕೆ : 227 ● ಪುಟಗಳು: 04 ● ಬಿಡಿ ಪ್ರತಿ: ರೂ. 1.50 ● ಮಾಸಿಕ ಚಂದಾ :ರೂ.50 facebook: HOSANAVIKA ದಿನಾಂಕ: 10-09-2026 ಗುರುವಾರ

ಕಾರ್ಯನಿರ್ವಾಹಕ ಸಂಪಾದಕ : ಡಾ. ಎಂ.ಪಿ.ಎಂ. ಷಣ್ಮುಖಯ್ಯ BA., B.Ed., ಸಂಸ್ಥಾಪಕ ಸಂಪಾದಕ: ಅಲ್ಫೋನ್ಸ್ ರಾಕೇಶ್ ಡಿಸೋಜ MA MCJ., MLISc., PGDMM., ಸುದ್ದಿಸಂಪಾದಕ : ಎಂ.ಪಿ.ಎಂ. ಚನ್ನಬಸಯ್ಯ BA., B.Ed.,

ಉದ್ಯೋಗ ಪಡೆಯಲು ಏಕಾಗ್ರತೆ, ಕಠಿಣ ಪರಿಶ್ರಮ ಅಗತ್ಯ: ಮಾಜಿ ಸಂಸದ ಆಯನೂರು ಮಂಜುನಾಥ್



(ಹೊಸನಾವಿಕ)

ಶಿವಮೊಗ್ಗ, ಸೆ.10: ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಏಕಾಗ್ರತೆ, ಆತ್ಮವಿಶ್ವಾಸ ಹಾಗೂ ಕಠಿಣ ಪರಿಶ್ರಮ ಅತ್ಯಗತ್ಯ. ಒಂದು ಮುಷ್ಟಿಯೊಳಗೆ ಇಡೀ ಪ್ರಪಂಚವನ್ನೇ ಹಿಡಿದಿಟ್ಟುಕೊಳ್ಳುವಷ್ಟು ಅವಕಾಶಗಳು ಇಂದಿನ ಶಿಕ್ಷಣ ಮತ್ತು ತಂತ್ರಜ್ಞಾನದಲ್ಲಿವೆ ಎಂದು ಮಾಜಿ ಸಂಸದ ಆಯನೂರು ಮಂಜುನಾಥ್ ಹೇಳಿದರು.

ನಗರದ ಕುವೆಂಪು ರಂಗ ಮಂದಿರದಲ್ಲಿ ಡಾ. ಶರತ್ ಮರಿಯಪ್ಪ ಫೌಂಡೇಷನ್, ಅಚೀವರ್ಸ್ ಟ್ರಸ್ಟ್ ಮತ್ತು ಕೋಚಿಂಗ್ ಸೆಂಟರ್ ಶಿವಮೊಗ್ಗ, ಸ್ಪರ್ಧಾ ಅರಿವು ಅಕಾಡೆಮಿ ಬೆಂಗಳೂರು ಹಾಗೂ ಸಾಧನಾ ಅಕಾಡೆಮಿ ಶಿಕಾರಿಪುರ ಸಹಯೋಗದಲ್ಲಿ ಆಯೋಜಿಸಿದ್ದ ನಿಮ್ಮ ಕನಸು-ನಮ್ಮ ಸಂಕಲ್ಪ ಉದ್ಯೋಗ ಪಥದ ಎರಡು ತಿಂಗಳ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗುರಿ ಸಾಧನೆಗೆ ಏಕಾಗ್ರತೆ ಬಹಳ ಮುಖ್ಯ. ಮೊಬೈಲ್‌ನ್ನು ಅಗತ್ಯ ಸಂವಹನಕ್ಕೆ ಮಾತ್ರ ಬಳಸಬೇಕು. ರೀಲ್ಸ್‌ಗಳಲ್ಲಿ ಪ್ರದರ್ಶನಕ್ಕೆ ಹೆಚ್ಚಿನ ಆದ್ಯತೆ ಇದ್ದು, ಭವಿಷ್ಯ ರೂಪಿಸಿಕೊಳ್ಳಲು ಅಗತ್ಯವಾದ ಮೌಲ್ಯಗಳ ಕೊರತೆ ಇದೆ. ಯುವಕರು ರೀಲ್ಸ್‌ಗೆ ಬಲಿಯಾಗದೆ, ಹೊರಜಗತ್ತಿನ ಮಾಹಿತಿಯನ್ನು ಪಡೆದುಕೊಂಡು ಕಾಲಕ್ಕೆ ತಕ್ಕಂತೆ ತಮ್ಮನ್ನು ಸಜ್ಜುಗೊಳಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕರಪ್ಷನ್ ಮತ್ತು ಕಾಂಪಿಟೇಷನ್ ನಡುವೆ ಉದ್ಯೋಗ ಸೃಷ್ಟಿಯಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯದ ಬಜೆಟ್‌ನ ಶೇ.40 ರಷ್ಟು ಸರ್ಕಾರಿ ನೌಕರರ ವೇತನಕ್ಕೆ ವೆಚ್ಚವಾಗುತ್ತಿದೆ. ಒಂದೂವರೆ ಲಕ್ಷಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳು ಖಾಲಿ ಇದ್ದರೂ ಅವುಗಳ ಭರ್ತಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತಿಲ್ಲ. ಮತ್ತೊಂದೆಡೆ, ಖಾಸಗಿ ವಲಯದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಕಾರಣದಿಂದ ಉದ್ಯೋಗ ಕಳೆದುಕೊಳ್ಳುವ ಆತಂಕವೂ ಎದುರಾಗಿದೆ ಎಂದರು.

ತರಬೇತಿ ತಜ್ಞ ಶಂಕರ್ ಮಾತನಾಡಿ, ವಿಭಿನ್ನ ಹಾಗೂ ತಾರ್ಕಿಕ ಆಲೋಚನೆಗಳು ಹೊಸ ಆವಿಷ್ಕಾರಗಳಿಗೆ ದಾರಿ ಮಾಡಿಕೊಡುತ್ತವೆ ಎಂದರು.

ಸಮಾಜ ಸೇವಕ ಡಾ. ಶರತ್ ಮರಿಯಪ್ಪ ಮಾತನಾಡಿ, ವಿದ್ಯಾವಂತರ ಸಂಖ್ಯೆ ಹೆಚ್ಚಾದರೂ ಉದ್ಯೋಗಾವಕಾಶಗಳಿಗೆ ಅನುಗುಣವಾಗಿ ಸ್ಪರ್ಧೆ ತೀವ್ರಗೊಂಡಿದೆ. ಬಸವಣ್ಣನವರ ಕಾಯಕವೇ ಕೈಲಾಸ ತತ್ವದಂತೆ ಇಚ್ಛಾಶಕ್ತಿಯಿಂದ ಪ್ರಯತ್ನಿಸಿದರೆ ಯಶಸ್ಸು ಸಾಧ್ಯ ಎಂದರು.

ಕೆಎಎಸ್, ಕೆಪಿಎಸ್‌ಸಿ, ಎಫ್‌ಡಿಎ, (4ನೇ ಪುಟಕ್ಕೆ)

ಕಸ್ತೂರಿ ರಂಗನ್ ವರದಿ: ಕಾಂಗ್ರೆಸ್ ರಾಜಕೀಯ ಲಾಭಕ್ಕೆ ಜನರನ್ನು ದಾರಿ ತಪ್ಪಿಸುತ್ತಿದೆ : ಆರಗ ಜ್ಞಾನೇಂದ್ರ ಆಕ್ರೋಶ

(ಹೊಸನಾವಿಕ)

ಶಿವಮೊಗ್ಗ, ಸೆ. 10: ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ನಾಯಕ ಆರಗ ಜ್ಞಾನೇಂದ್ರ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಶ್ಚಿಮ ಘಟ್ಟದ ಪರಿಸರ ಸಂರಕ್ಷಣೆ ಮತ್ತು ಅಲ್ಲಿನ ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಪಕ್ಷಾತೀತವಾಗಿ ಚರ್ಚೆ ನಡೆಸುವ ಅಗತ್ಯವಿದೆ. ಜನರನ್ನು ಹೊರಗಿಟ್ಟು ಪರಿಸರ ಸಂರಕ್ಷಣೆ ಸಾಧ್ಯವಿಲ್ಲ. ಹೀಗಾಗಿ ಪಶ್ಚಿಮ ಘಟ್ಟದ ನಿವಾಸಿಗಳಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ವೈಜ್ಞಾನಿಕ ಹಾಗೂ



ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದರು.

ಗಾಡ್ಗಿಳ್ ಹಾಗೂ ಕಸ್ತೂರಿ ರಂಗನ್ ವರದಿಗಳಿಗೆ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲೇ ಚಾಲನೆ ನೀಡಲಾಗಿತ್ತು. 2009-10ರಲ್ಲಿ ಅಂದಿನ ಕೇಂದ್ರ ಪರಿಸರ ಸಚಿವ ಜೈರಾಮ್ ರಮೇಶ್ ನೇತೃತ್ವದಲ್ಲಿ ಗಾಡ್ಗಿಳ್ ಸಮಿತಿ ರಚಿಸಲಾಗಿತ್ತು. ಬಳಿಕ ಕಸ್ತೂರಿ ರಂಗನ್ ಸಮಿತಿಯನ್ನೂ ಯುಪಿಎ ಸರ್ಕಾರವೇ ನೇಮಿಸಿತ್ತು. ವರದಿಗೆ ಸಂಬಂಧಿಸಿದ ಮೊದಲ ಅಧಿಸೂಚನೆಯೂ ಅದೇ ಅವಧಿಯಲ್ಲಿ ಹೊರಬಂದಿತ್ತು. ಹೀಗಾಗಿ ವರದಿಯಿಂದ ಪಶ್ಚಿಮ ಘಟ್ಟದ ಜನರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಕಾಂಗ್ರೆಸ್‌ಗೆ ನಿಜವಾದ ಕಾಳಜಿ ಇದ್ದರೆ ಜನರ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದರು.

2008ರಿಂದ 2018ರವರೆಗೆ ಕಿಮ್ಮನೆ ರತ್ನಾಕರ್ ಶಾಸಕರಾಗಿದ್ದ ಅವಧಿಯಲ್ಲೇ ಗಾಡ್ಗಿಳ್ ಮತ್ತು ಕಸ್ತೂರಿ ರಂಗನ್ ವರದಿಗಳು ಬಂದಿದ್ದವು. ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಇದೀಗ ಕಾಂಗ್ರೆಸ್ ನಾಯಕರು ಈ ವಿಚಾರವನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು.

ಕಸ್ತೂರಿ ರಂಗನ್ ವರದಿ ಕುರಿತು ಮಾತನಾಡುವ ಮುನ್ನ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಕಿಮ್ಮನೆ ರತ್ನಾಕರ್ ಸಮಗ್ರ ಅಧ್ಯಯನ ಮಾಡಬೇಕು. ತಿಳಿವಳಿಕೆಯಿಲ್ಲದೆ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು ಎಂದು ಸಲಹೆ ನೀಡಿದರು.

ಕೇರಳ ಮಾದರಿಯಲ್ಲಿ ಪಶ್ಚಿಮ ಘಟ್ಟದ ಯಾವ ಪ್ರದೇಶಗಳನ್ನು ವರದಿ ವ್ಯಾಪ್ತಿಗೆ ಸೇರಿಸಬೇಕು, ಯಾವುದನ್ನು ಹೊರಗಿಡಬೇಕು ಎಂಬ ಬಗ್ಗೆ ರಾಜ್ಯ ಸರ್ಕಾರ ಸಮಗ್ರ ವರದಿ ಸಿದ್ಧಪಡಿಸಿ ಕೇಂದ್ರಕ್ಕೆ ಸಲ್ಲಿಸಬೇಕು. ಕೇಂದ್ರವನ್ನು ದೂರುವ ಬದಲು ಈ ಕಾರ್ಯಕ್ಕೆ ಮುಂದಾಗಬೇಕು (4ನೇ ಪುಟಕ್ಕೆ)

ಸೆ.11ರಿಂದ ನಗರದಲ್ಲಿ ಸ್ಯಾಂಡಲ್ ಸೋಪ್ ಮೇಳ

(ಹೊಸನಾವಿಕ)

ಶಿವಮೊಗ್ಗ, ಸೆ.10: ಸಾಬೂನು ತಯಾರಿಕೆಯಲ್ಲಿ ವಿಶ್ವದಲ್ಲಿಯೇ ಹೆಸರು ಗಳಿಸಿರುವ ಹಾಗೂ ಶತಮಾನೋತ್ಸವವನ್ನು ಪೂರೈಸಿರುವ ಕರ್ನಾಟಕ ಸರ್ಕಾರದ ಹೆಮ್ಮೆಯ ಸಂಸ್ಥೆ ಎಂಬ ಖ್ಯಾತಿಗೆ ಪಾತ್ರವಾಗಿರುವ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು ಸೆ.11 ರಿಂದ 18 ರವರೆಗೆ ರಿಯಾಯಿತಿ ದರದಲ್ಲಿ ಮೈಸೂರು ಸ್ಯಾಂಡಲ್ ಸಾಬೂನು ಮೇಳವನ್ನು ಆಯೋಜಿಸಿದೆ.

ಶಿವಮೊಗ್ಗ ನಗರದ ಮೆಗ್ಗಾನ್ ಆಸ್ಪತ್ರೆ ಎದುರಿನಲ್ಲಿರುವ ಪೊಲೀಸ್ ಭವನದಲ್ಲಿ ನಾಳೆ ಬೆಳಗ್ಗೆ 11ಕ್ಕೆ ಮೇಳ ಆರಂಭವಾಗಲಿದ್ದು, ಮೈಸೂರು ಸ್ಯಾಂಡಲ್ ಸಾಬೂನು ಉತ್ಪನ್ನಗಳನ್ನು ಭಾರೀ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು.


ಪ್ರಧಾನ ವ್ಯವಸ್ಥಾಪಕರಾದ ಗಂಗಪ್ಪ ಅವರು ಮೇಳವನ್ನು ಉದ್ಘಾಟಿಸುವರು. ಶಾಖಾ ವ್ಯವಸ್ಥಾಪಕರಾದ ಸುಷ್ಮಾ ಸೇರಿದಂತೆ ಕಂಪನಿಯ ಪ್ರತಿನಿಧಿಗಳು ಹಾಜರಿರುತ್ತಾರೆ. ಕನ್ನಡ ನಾಡಿನ ಅಸ್ಮಿತೆಯಾದ ಮೈಸೂರು ಸ್ಯಾಂಡಲ್ ಉತ್ಪನ್ನಗಳ ಖರೀದಿಗೆ ಇರುವ ಈ ಅವಕಾಶವನ್ನು ಮಲೆನಾಡಿನ ಜನ ಬಳಸಿಕೊಳ್ಳಬೇಕೆಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ವಿಕಸಿತ ಭಾರತ ರಸಪ್ರಶ್ನೆ: ಯುವಕರಿಗೆ ರಾಷ್ಟ್ರಮಟ್ಟದ ಅವಕಾಶ: ಐಶ್ವರ್ಯ ಶ್ರೀನಿವಾಸ್

(ಹೊಸನಾವಿಕ)

ಶಿವಮೊಗ್ಗ, ಸೆ. 10: ಯುವಜನರನ್ನು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಉದ್ದೇಶದಿಂದ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಮೈ ಭಾರತ್ ಸಂಸ್ಥೆಯು ವಿಕಸಿತ ಭಾರತ ಯುವ ನಾಯಕರ ಸಂವಾದ 2027?ರ ಅಂಗವಾಗಿ ವಿಕಸಿತ ಭಾರತ ರಸಪ್ರಶ್ನೆ ಆಯೋಜಿಸಿದೆ ಎಂದು ಜಿಲ್ಲಾ ಯುವ ಅಧಿಕಾರಿ ಐಶ್ವರ್ಯ ಶ್ರೀನಿವಾಸ್ ಸುದ್ದಿಗೋಷ್ಟಿಯಲ್ಲಿ ತಿಳಿಸಿದರು.

15ರಿಂದ 29 ವರ್ಷದೊಳಗಿನ ಯುವಕರು ರಸಪ್ರಶ್ನೆಯಲ್ಲಿ ಭಾಗವಹಿಸಬಹುದು. ಆ.17ರಿಂದ ಸೆ.30ರವರೆಗೆ ಮೈ ಭಾರತ್ ಅಂತರ್ಜಾಲ ತಾಣದಲ್ಲಿ ನಡೆಯಲಿರುವ ರಸಪ್ರಶ್ನೆಯಲ್ಲಿ ಕನ್ನಡ ಸೇರಿದಂತೆ ವಿವಿಧ ಭಾರತೀಯ ಭಾಷೆಗಳಲ್ಲಿ ಭಾಗವಹಿಸಲು ಅವಕಾಶವಿದೆ. 20 ಪ್ರಶ್ನೆಗಳಿಗೆ 10 ನಿಮಿಷಗಳಲ್ಲಿ ಉತ್ತರಿಸಬೇಕಾಗುತ್ತದೆ ಎಂದರು.



ವಿಕಸಿತ ಭಾರತದ ಪರಿಕಲ್ಪನೆಯೊಂದಿಗೆ ಯುವಕರನ್ನು ಸಂಪರ್ಕಿಸುವ ಉದ್ದೇಶ ಹೊಂದಿರುವ ಈ ರಸಪ್ರಶ್ನೆಯಲ್ಲಿ ಕಳೆದ ವರ್ಷ ದೇಶಾದ್ಯಂತ 50 ಲಕ್ಷಕ್ಕೂ ಅಧಿಕ ಯುವಕರು ಭಾಗವಹಿಸಿದ್ದರು. ಈ ಬಾರಿ ಉತ್ತಮ ಸಾಧನೆ ಮಾಡುವ ಅಗ್ರ ಶೇ.10 ರಷ್ಟು ಸ್ಪರ್ಧಿಗಳು ಮುಂದಿನ ಹಂತದ ಪ್ರಬಂಧ ಸವಾಲಿಗೆ ಆಯ್ಕೆಯಾಗಲಿದ್ದು, ಬಳಿಕ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ವೇದಿಕೆಗಳಲ್ಲಿ ತಮ್ಮ ಆಲೋಚನೆಗಳನ್ನು ಮಂಡಿಸಲು ಅವಕಾಶ ದೊರೆಯಲಿದೆ.

ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಯುವ ನಾಯಕರಿಗೆ ರಾಷ್ಟ್ರೀಯ ನಾಯಕರು, ನೀತಿ ನಿರೂಪಕರು ಹಾಗೂ ತಜ್ಞರೊಂದಿಗೆ ಸಂವಾದ ನಡೆಸುವ ಅವಕಾಶ ಸಿಗಲಿದೆ. ಅಲ್ಲದೆ, ಸಾಂಸ್ಕೃತಿಕ, ಭಾರತಕ್ಕಾಗಿ ವಿನ್ಯಾಸ ಹಾಗೂ ಸಾಮಾಜಿಕ ಕಾರಣಕ್ಕಾಗಿ ತಾಂತ್ರಿಕ ಪರಿಹಾರ ಸೇರಿದಂತೆ ವಿವಿಧ ವಿಭಾಗಗಳಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶವಿದೆ ಎಂದರು.

ಶಿವಮೊಗ್ಗ ಜಿಲ್ಲೆಯ 15ರಿಂದ 29 ವರ್ಷದ ಎಲ್ಲ ಯುವಕ-ಯುವತಿಯರು ಸೆ.30ರೊಳಗೆ ಮೈ ಭಾರತ್ ತಾಣದಲ್ಲಿ ನೋಂದಾಯಿಸಿಕೊಂಡು ಈ ರಾಷ್ಟ್ರೀಯ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಮುಂದಿನ ಹಂತಗಳು: ಆ.17-ಸೆ.30: ವಿಕಸಿತ ಭಾರತ ರಸಪ್ರಶ್ನೆ; ಅ.5-19: ಪ್ರಬಂಧ ಸವಾಲು; ನ.10-16: ಜಿಲ್ಲಾ ಮಟ್ಟದ ಸ್ಪರ್ಧೆ; ನ.17-ಡಿ.7: ರಾಜ್ಯ ಮಟ್ಟದ ಸಂವಾದ; ಜ.10-12: ನವದೆಹಲಿಯಲ್ಲಿ ರಾಷ್ಟ್ರಮಟ್ಟದ ಸಂವಾದ.

ಬೆಂಗಳೂರಾಚೆ ಕೈಗಾರಿಕಾ ಅಭಿವೃದ್ಧಿಗೆ ಶಿವಮೊಗ್ಗ ಸೇರ್ಪಡೆ: ರುದ್ರೇಗೌಡ



(ಹೊಸನಾವಿಕ)

ಶಿವಮೊಗ್ಗ, ಸೆ.10: ಬೆಂಗಳೂರಿನಾಚೆ ಕೈಗಾರಿಕಾ ಅಭಿವೃದ್ಧಿಗೆ ರಾಜ್ಯ ಸರ್ಕಾರ ರೂಪಿಸಿರುವ ಉಪಕ್ರಮದಲ್ಲಿ ಶಿವಮೊಗ್ಗ ನಗರವನ್ನು ಪ್ರಮುಖ ಕೈಗಾರಿಕಾ ಅಭಿವೃದ್ಧಿ ನಗರವಾಗಿ ಸೇರ್ಪಡೆಗೊಳಿಸಬೇಕು ಎಂದು ಕೈಗಾರಿಕೋದ್ಯಮಿ ಎಸ್. ರುದ್ರೇಗೌಡ ಒತ್ತಾಯಿಸಿದರು.

ಜಿಲ್ಲಾ ವಾಣಿಜ್ಯ ಸಂಘ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಬೆಂಗಳೂರಿನ ಹೊರಗಿನ ಐದು ನಗರಗಳನ್ನು ಕೈಗಾರಿಕಾ ಅಭಿವೃದ್ಧಿಗೆ ಆಯ್ಕೆ ಮಾಡುವ ಸಂದರ್ಭದಲ್ಲಿ ಶಿವಮೊಗ್ಗಕ್ಕೂ ಆದ್ಯತೆ ನೀಡಬೇಕು ಎಂದರು.

ಶಿವಮೊಗ್ಗದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ (ಎಂಎಸ್‌ಎಂಇ) ಅನುಕೂಲಕರ ಕೈಗಾರಿಕಾ ವಾತಾವರಣವಿದೆ. ವಿಮಾನ ನಿಲ್ದಾಣ, ಉತ್ತಮ ರಸ್ತೆ ಮತ್ತು ರೈಲು ಸಂಪರ್ಕ, ಶೈಕ್ಷಣಿಕ ಸಂಸ್ಥೆಗಳು ಹಾಗೂ ತಂತ್ರಜ್ಞಾನ ಮೂಲಸೌಕರ್ಯ ಸೇರಿದಂತೆ ಕೈಗಾರಿಕಾ ಬೆಳವಣಿಗೆಗೆ ಅಗತ್ಯವಾದ ಹಲವು ಸೌಲಭ್ಯಗಳು ಈಗಾಗಲೇ ಲಭ್ಯವಿವೆ ಎಂದು ಹೇಳಿದರು.

ಫೌಂಡ್ರಿ, ಆಹಾರ ಸಂಸ್ಕರಣೆ, ಕೃಷಿ ಉತ್ಪನ್ನ ಆಧಾರಿತ ಕೈಗಾರಿಕೆ, ಶಿಮೂಲ್ ಹಾಗೂ ಜವಳಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕೈಗಾರಿಕಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ. ಹೀಗಾಗಿ ಶಿವಮೊಗ್ಗವನ್ನು ಪ್ರಮುಖ ಉತ್ಪಾದನಾ ಮತ್ತು ಎಂಜಿನಿಯರಿಂಗ್ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ವಿಪುಲ ಅವಕಾಶಗಳಿವೆ ಎಂದು ಅಭಿಪ್ರಾಯಪಟ್ಟರು.

ಬಿಯಾಂಡ್ ಬೆಂಗಳೂರು ಉಪಕ್ರಮವು ಎರಡನೇ ಮತ್ತು ಮೂರನೇ ಹಂತದ ನಗರಗಳನ್ನು ಸಬಲೀಕರಣಗೊಳಿಸುವ ಜತೆಗೆ ಉದ್ಯೋಗ ಸೃಷ್ಟಿ ಹಾಗೂ ರಾಜ್ಯದ ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡಲಿದೆ. (4ನೇ ಪುಟಕ್ಕೆ)

ದನದ ಮಾಂಸ ಅಕ್ರಮ ಮಾರಾಟ ದೊಡ್ಡಪೇಟೆ ಠಾಣೆಯಲ್ಲಿ ದೂರು

ಶಿವಮೊಗ್ಗ, ಸೆ.10: ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಹಿಂಭಾಗದ ಬುದ್ಧ ನಗರದ 1ನೇ ಕ್ರಾಸ್‌ನಲ್ಲಿ ದನದ ಮಾಂಸ ಮಾರಾಟ ಮಾಡುತ್ತಿದ್ದಾರೆ ಎಂದು ಖಚಿತ ಮಾಹಿತಿ ಮೇರೆಗೆ ಹಿಂದೂ ಸಂಘಟನೆಗಳು ದೊಡ್ಡಪೇಟೆ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ದೊಡ್ಡಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ದನದ ಮಾಂಸ ಮಾರಾಟ ಮಾಡುತ್ತಿದ್ದ ಮಸೂದ್ ಎಂಬ ವ್ಯಕ್ತಿಯನ್ನು ವಶಕ್ಕೆ ಪಡೆದು ಸ್ಥಳದಲ್ಲಿದ್ದ ಸುಮಾರು 6 ಸಾವಿರ ರೂ. ಮೌಲ್ಯದ 19.5 ಕೆಜಿ ದನದ ಮಾಂಸ ವಶಕ್ಕೆ ಪಡೆದಿದ್ದಾರೆ.

ದೊಡ್ಡಪೇಟೆ ಪೊಲೀಸ್ ಠಾಣೆ ಆವರಣದಲ್ಲಿ ಜೆಸಿಬಿಯಿಂದ ಗುಂಡಿ ತೋಡಿ ಮಾಂಸವನ್ನು ಹೂತು ಹಾಕಿದ್ದಾರೆ. ಈ ಸಂಬಂಧ ಹಿಂದೂ ಜಾಗರಣಾ ವೇದಿಕೆಯ ಕೆಲವು ಸದಸ್ಯರು ದೊಡ್ಡಪೇಟೆ ಠಾಣೆ ಆವರಣದಲ್ಲಿ ಜಮಾಯಿಸಿದ್ದರು. ಪೊಲೀಸರ ಕಾರ್ಯ ಖಚಿತಪಡಿಸಿ ಸ್ಥಳದಿಂದ ತೆರಳಿದ್ದಾರೆ. ಅಲ್ಲದೇ ಮುಂದೆ ಈ ರೀತಿ ಘಟನೆ ಆಗದಂತೆ ಪೊಲೀಸರು ಎಚ್ಚರಿಕೆ ವಹಿಸಬೇಕೆಂದು ಆಗ್ರಹಿಸಿದ್ದಾರೆ.

ಶಿವ ಸಂಕಲ್ಪ ಒಕ್ಕೂಟದ ವಾರ್ಷಿಕೋತ್ಸವ: ಹಿರಿಯ ದಂಪತಿಗಳಿಗೆ ಸನ್ಮಾನ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ: ಮಹಾಲಿಂಗಯ್ಯ ಶಾಸ್ತ್ರಿ ವಿವರಣೆ



(ಹೊಸನಾವಿಕ)

ಶಿವಮೊಗ್ಗ, ಸೆ.10: ಜಾತಿ, ಉಪಜಾತಿ ಹಾಗೂ ಪಂಗಡಗಳ ಭೇದಭಾವ ತೊರೆದು ವೀರಶೈವ-ಲಿಂಗಾಯತ ಸಮಾಜವನ್ನು ಒಗ್ಗೂಡಿಸುವ ಉದ್ದೇಶದಿಂದ ಸ್ಥಾಪನೆಯಾದ ಶಿವ ಸಂಕಲ್ಪ ವೀರಶೈವ- ಲಿಂಗಾಯತ ಒಕ್ಕೂಟದ ಪ್ರಥಮ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಸೆ.23ರಂದು ಸಂಜೆ 4 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಹಿರಿಯ ದಂಪತಿಗಳ ಸನ್ಮಾನ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಒಕ್ಕೂಟದ ಮಹಾ ಪೋಷಕ ಮಹಾಲಿಂಗಯ್ಯ ಶಾಸ್ತ್ರಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಕ್ಕೂಟವು ಯಶಸ್ವಿಯಾಗಿ ಒಂದು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 50 ವರ್ಷಗಳ ವೈವಾಹಿಕ ಜೀವನ ಪೂರೈಸಿದ ವೀರಶೈವ-ಲಿಂಗಾಯತ ಸಮಾಜದ ಹಿರಿಯ ದಂಪತಿಗಳನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಗುವುದು. 10ನೇ ಮತ್ತು 12ನೇ ತರಗತಿಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ (4ನೇ ಪುಟಕ್ಕೆ)

ಸೆ.12: ಕುರುಬ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಲುಮತ ಚೇತನ ಪ್ರಶಸ್ತಿ ಪ್ರಧಾನ: ಡಾ| ಪ್ರಶಾಂತ್ ವಿವರಣೆ

ಶಿವಮೊಗ್ಗ, ಸೆ.10: ಹಾಲುಮತ ಮಹಾಸಭಾ ಹಾಗೂ ಕನಕ ನೌಕರರ ಸಂಘದ ಆಶ್ರಯದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.90ರಷ್ಟು ಅಂಕ ಗಳಿಸಿದ ಕುರುಬ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಮಾಜಮುಖಿ ಸೇವೆ ಸಲ್ಲಿಸಿದವರಿಗೆ 'ಹಾಲುಮತಚೇತನ' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಾಲುಮತ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಡಾ.ಪ್ರಶಾಂತ್ ಸುದ್ದಿಗೋಷ್ಟಿಯಲ್ಲಿ ತಿಳಿಸಿದರು.

ಸರ್ಕಾರಿ ನೌಕರರ ಭವನದಲ್ಲಿ ಸೆ. 12ರ ಬೆಳಿಗ್ಗೆ 10ಗಂಟೆಗೆ ಕಾರ್ಯಕ್ರಮ ಜರುಗಲಿದ್ದು, ಈ ಬಾರಿಯ ಹಾಲುಮತಚೇತನ ಪ್ರಶಸ್ತಿಯನ್ನು ಸಮಾಜದ ಹಿರಿಯ ಮುಖಂಡ ಹರಳೆಣ್ಣೆ ರಾಮಪ್ಪ ಕುಂಸಿ ಅವರಿಗೆ ನೀಡಿ ಗೌರವಿಸಲಾಗುವುದು ಎಂದರು.

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಸಮಾರಂಭ ಉದ್ಘಾಟಿಸಲಿದ್ದು, ಮಹಾಸಭಾ ಜಿಲ್ಲಾಧ್ಯಕ್ಷ ಸಿ.ದಾನೇಶ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಿಗುಳಿ, ಪ್ರಧಾನ ಕಾರ್ಯದರ್ಶಿ ಪುರುಷೋತ್ತಮ್ ಮರಿಗೌಡ್ರು, ಪ್ರಮುಖರಾದ ಕೆ.ಎಸ್. ಈಶ್ವರಪ್ಪ, ಆರ್. ಪ್ರಸನ್ನ ಕುಮಾರ್, ಎಂ. ಶ್ರೀಕಾಂತ್, ಇನ್ನಿತರರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ದಿವ್ಯ ಸಾನಿಧ್ಯವನ್ನು ಶ್ರೀ ಕ್ಷೇತ್ರ ಕಾಗಿನೆಲೆಯ ಶ್ರೀ ನಿರಂಜನಾನಂದ ಪುರಿ ಮಹಾಸ್ವಾಮಿ ಹಾಗೂ ಶ್ರೀ ಈಶ್ವರಾನಂದಪುರಿ ಸ್ವಾಮಿ ವಹಿಸಲಿದ್ದಾರೆ. ಸುಮಾರು 75 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಈ ಬಾರಿ ಪ್ರತಿಭಾ ಪುರಸ್ಕಾರ ವಿತರಿಸಲಾಗುತ್ತದೆ ಎಂದು ಮಹಾಸಭಾದ ಜಿಲ್ಲಾಕಾರ್ಯಾಧ್ಯಕ್ಷ ಗಣೇಶ್ ಬಿಳಿಗಿ ತಿಳಿಸಿದರು.

ಸಿ. ದಾನೇಶ್, ದೊಡ್ಡಪ್ಪ, ವಿನಯ್ ಕುಮಾರ್, ಸಿದ್ದಪ್ಪ, ಚೇತನ್ ಉಪಸ್ಥಿತರಿದ್ದರು.

ಈಸೂರಿನಿಂದ ಶಿಕಾರಿಪುರದವರೆಗೆ ನಾಳೆ ಬೃಹತ್ ಪಾದಯಾತ್ರೆ ಕಸ್ತೂರಿ ರಂಗನ್ ವರದಿ ಜಾರಿಗೆ ವಿರೋಧಿಸಿ ಒಟ್ಟಾಗಿ ಹೆಜ್ಜೆ ಹಾಕೋಣ: ಮಧು

(ಹೊಸನಾವಿಕ)

ಶಿವಮೊಗ್ಗ, ಸೆ. 10: ಕಸ್ತೂರಿ ರಂಗನ್ ವರದಿಯನ್ನು ಯಾವುದೇ ಕಾರಣಕ್ಕೂ ಜಾರಿಗೆ ಅವಕಾಶ ನೀಡುವುದಿಲ್ಲ, ಮಲೆನಾಡಿನ ರೈತರು, ಕೃಷಿ, ಪರಿಸರ ಹಾಗೂ ಜನರ ಬದುಕಿನ ರಕ್ಷಣೆ ಕಾಂಗ್ರೆಸ್ ಸರ್ಕಾರದ ಪ್ರಮುಖ ಗುರಿ ಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಹೇಳಿದರು.

ಕಸ್ತೂರಿ ರಂಗನ್ ವರದಿ ವಿರೋಧಿಸಿ ಸೆ.11ರ ನಾಳೆ ಶಿಕಾರಿಪುರದಲ್ಲಿ ನಡೆಯಲಿರುವ ಬೃಹತ್ ಪಾದಯಾತ್ರೆಯ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಭಾರತದ ಮೊದಲ ಸ್ವಾತಂತ್ರ್ಯ ಗ್ರಾಮ ಎಂದು ಘೋಷಿಸಲ್ಪಟ್ಟಿರುವ ಈಸೂರಿನಿಂದ ಬೆಳಿಗ್ಗೆ 9ಗಂಟೆಗೆ ಪಾದಯಾತ್ರೆ ಆರಂಭವಾಗಲಿದ್ದು, ಶಿಕಾರಿಪುರದವರೆಗೆ ಸಾಗಲಿದೆ. ತಾವೂ ಪಾದಯಾತ್ರೆಯಲ್ಲಿ ಭಾಗವಹಿಸುವುದಾಗಿ ತಿಳಿಸಿದ ಅವರು, ಕಾಂಗ್ರೆಸ್ ಕಾರ್ಯಕರ್ತರು ಮಾತ್ರವಲ್ಲದೆ ವರದಿ ವಿರೋಧಿಸುವ ಎಲ್ಲರೂ ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಬೇಕು ಎಂದು ಕರೆ ನೀಡಿದರು.

ಸಿದ್ದರಾಮಯ್ಯ ಅವರು 2013ರಿಂದ 2018ರವರೆಗೆ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸಿದ್ದರು. ಆದರೂ ಕೇಂದ್ರ ಸರ್ಕಾರ ಪದೇಪದೇ ಕರಡು ಅಧಿಸೂಚನೆ ಹೊರಡಿಸುತ್ತಿದ್ದು, ಇದೀಗ ಏಳನೇ ಬಾರಿಗೆ ಕರಡು ಅಧಿಸೂಚನೆ ಹೊರಡಿಸಿರುವುದನ್ನು ತೀವ್ರವಾಗಿ ಖಂಡಿಸುವುದಾಗಿ ಮಧು ಬಂಗಾರಪ್ಪ ಹೇಳಿದರು.

ವರದಿ ಜಾರಿಯಾದರೆ ಪಶ್ಚಿಮ ಘಟ್ಟ ವ್ಯಾಪ್ತಿಯ 1,576 ಗ್ರಾಮಗಳ ರೈತರ ಬದುಕು ಅತಂತ್ರವಾಗಲಿದೆ. ಶಿವಮೊಗ್ಗ ಜಿಲ್ಲೆಯೊಂದರಲ್ಲೇ 484 ಗ್ರಾಮಗಳ ಜನರ



ಜೀವನದ ಮೇಲೆ ತೀವ್ರ ಪರಿಣಾಮ ಬೀರುವ ಸಾಧ್ಯತೆಯಿದ್ದು, ಕೃಷಿ ಚಟುವಟಿಕೆಗಳಿಗೂ ದೊಡ್ಡ ಹೊಡೆತ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮಲೆನಾಡಿನ ರೈತರು ಪರಿಸರದೊಂದಿಗೆ ಬೆರೆತು ಬದುಕುತ್ತಿದ್ದಾರೆ. ತಲೆತಲಾಂತರಗಳಿಂದ ಕೃಷಿ ಮಾಡಿಕೊಂಡು ಬಂದಿದ್ದಾರೆ. ದೆಹಲಿಯಲ್ಲಿ ಕುಳಿತು ಅಡಕೆ ಮರಗಳನ್ನು ಕಾಡು ಎಂದು ಪರಿಗಣಿಸುವವರಿಗೆ ಮಲೆನಾಡಿನ ವಾಸ್ತವ ಪರಿಸ್ಥಿತಿಯ ಅರಿವಿದೆಯೇ ಎಂದು ಪ್ರಶ್ನಿಸಿದ ಅವರು, ರೈತರ ಬದುಕಿನ ವಿಚಾರದಲ್ಲಿ ಕೇಂದ್ರ ಸರ್ಕಾರ ಮಾನವೀಯತೆ ಮೆರೆಯಬೇಕು ಎಂದರು.

ತಮ್ಮ ತಂದೆ ಹಾಗೂ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರು ಕಾವೇರಿ ನೀರಿನ ವಿಚಾರದಲ್ಲಿ ವಿಶೇಷ ಅಧಿವೇಶನ ಕರೆದು ರಾಜ್ಯದ ಹಿತ ಕಾಪಾಡಲು ದೃಢ ನಿರ್ಧಾರ ಕೈಗೊಂಡಿದ್ದರು. ಅದೇ ಹೋರಾಟದ ಪರಂಪರೆ ಯಲ್ಲಿ ಮಲೆನಾಡಿನ ಜನರ ಬದುಕು, ರೈತರ ಹಕ್ಕು ಹಾಗೂ ಪರಿಸರ ರಕ್ಷಣೆಗಾಗಿ ಹೋರಾಟ ಮುಂದುವರಿಸಲಾಗುತ್ತಿದೆ ಎಂದರು.

ಕಸ್ತೂರಿ ರಂಗನ್ ವರದಿ ಕುರಿತು ಚರ್ಚಿಸಲು ಮೂರು ದಿನಗಳ ವಿಶೇಷ ಅಧಿವೇಶನ ಕರೆದಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಧನ್ಯವಾದ ಸಲ್ಲಿಸಿದ ಅವರು, ರಾಜ್ಯದ (2ನೇ ಪುಟಕ್ಕೆ)




ಪ್ರೊ। ಸತ್ಯನಾರಾಯಣ
ನಿವೃತ್ತ ಪ್ರಾಂಶುಪಾಲರು-ಕವಿಗಳು

ವಿಜಯದಶಮಿ

ಅಂತರಂಗದ ಅಸುರರ
ಅಂತ್ಯವಾದಾಗ
ವಿಜಯದಶಮಿಗೆ
ವಿಶೇಷ ಮೆರುಗು ಆಗ

ಹೊಸನಾವಿಕ - ನಾಳಿನ ಭವಿಷ್ಯ

ಮೇಷ




ನಿಮ್ಮ ಆಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಆದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ.

ವೃಷಭ




ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ. ಇವತ್ತು ಡೇಟ್‌ಗೆ ಹೋದಲ್ಲಿ ವಿವಾದಾತ್ಮಕ ವಿಷಯಗಳನ್ನು ಕೆದಕುವುದನ್ನು ತಪ್ಪಿಸಿ. ಏನಾದರೂ ಆಗುತ್ತದೆಂದು ನಿರೀಕ್ಷಿಸಬೇಡಿ - ಹೊರಹೋಗಿ ಹೊಸ ಅವಕಾಶಗಳಿಗಾಗಿ ಹುಡುಕಿ.

ಮಿಥುನ



ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ, ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪ ದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ.

ಕರ್ಕಾಟಕ



ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

ಸಿಂಹ



ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು. ಇಂದು ಹೆಚ್ಚಿನ ಸಾಧನೆ ಮತ್ತು ಉನ್ನತ ಪ್ರೊಫೈಲ್‌ಗೆ ಒಂದು ಒಳ್ಳೆಯ ದಿನ.

ಕನ್ಯಾ




ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು. ಅವರಿಗೆ ನೋವುಂಟುಮಾಡದಿರಲು ಆಜ್ಞಾಧಾರಕರಾಗಿರುವುದು ಒಳ್ಳೆಯದು.

ತುಲಾ




ನಿಮ್ಮನ್ನು ನೀವೇ ಅನಗತ್ಯವಾಗಿ ದೂಷಿಸುವುದು ನಿಮ್ಮ ಚೈತನ್ಯವನ್ನು ಕುಗ್ಗಿಸಬಹುದು. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಅರ್ಹರಿಗೆ ವೈವಾಹಿಕ ಮೈತ್ರಿಗಳು. ನಿಮ್ಮ ಕಿಟಕಿಯಲ್ಲಿ ಹೂವಿಡುವ ಮೂಲಕ ನಿಮ್ಮ ಪ್ರೀತಿಯನ್ನು ತೋರಿಸಿ. ನೀವು ಇತರರ ನೆರವಿಲ್ಲದೆಯೇ ನಿಮ್ಮ ಪ್ರಮುಖ ಕೆಲಸಗಳನ್ನು ನಿಭಾಯಿಸಬಲ್ಲರಿ ಎಂದು ನಿಮಗನಿಸಿದಲ್ಲಿ ನೀವು ತಪ್ಪಾಗಿ ಭಾವಿಸಿದ್ದೀರಿ. ಈ ದಿನವು ಇಂದು ನಿಮ್ಮ ಸಂಗಾತಿಯ ಪ್ರಣಯದ ಉತ್ಕಟತೆಯನ್ನು ತೋರಿಸುತ್ತದೆ.

ವೃಶ್ಚಿಕ



ನಿಮ್ಮ ಚೈತನ್ಯವನ್ನು ಹೆಚ್ಚಿಸಲು ನಿಮ್ಮ ಮನಸ್ಸಿನಲ್ಲಿ ಒಂದು ಪ್ರಕಾಶಮಾನವಾದ ಸುಂದರವಾದ ಮತ್ತು ಅದ್ಭುತವಾದ ಚಿತ್ರವನ್ನು ಕಲ್ಪಿ ಸಿಕೊಳ್ಳಿ. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಹಳೆಯ ಸಂಪರ್ಕಗಳು ಮತ್ತು ಸ್ನೇಹಿತರು ಸಹಾಯ ಮಾಡುತ್ತಾರೆ ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು. ವೃತ್ತಿಪರ ವಿಷಯಗಳನ್ನು ಆರಾಮವಾಗಿ ಬಗೆಹರಿಸಲು ನಿಮ್ಮ ಅನುಭವವನ್ನು ಬಳಸಿ.

ಧನು



ಹಣದ ಸ್ಥಾನ ಮತ್ತು ಆರ್ಥಿಕ ಸಮಸ್ಯೆಗಳು ಒತ್ತಡದ ಮೂಲವಾಗಿರುತ್ತವೆ. ಆರ್ಥಿಕ ನಿರ್ಬಂಧಗಳನ್ನು ತಪ್ಪಿ ಸಲು ನಿಮ್ಮ ಬಜೆಟ್‌ಗೆ ಅಂಟಿಕೊಳ್ಳಿ. ಸಂಬಂಧಿಗಳು ನಿಮ್ಮ ಅತೀ ಉದಾರ ವರ್ತನೆಯ ಅನುಚಿತ ಲಾಭ ಪಡೆಯಲು ಪ್ರಯತ್ನಿಸುತ್ತಾರೆ. ನಿಮ್ಮನ್ನು ನಿಯಂತ್ರಿಸಕೊಳ್ಳದಿದ್ದರೆ ನೀವು ಮೋಸಹೋಗಬಹುದು. ಉದಾರತೆ ಸ್ವಲ್ಪ ಮಟ್ಟಿಗೆ ಒಳ್ಳೆಯದಾದರೂ ಅದು ಒಂದು ಮಿತಿ ದಾಟಿದರೆ ಸಮಸ್ಯೆಗಳನ್ನು ಸೃಷ್ಟಿಸಬಹುದೆಂದು ನೀವು ನೆನಪಿನಲ್ಲಿಟ್ಟುಕೊಳ್ಳಬೇಕು.

ಮಕರ



ನೀವು ದೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿ ಸಿ - ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು-ಇದು ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಬಹುದು. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ನಿಮ್ಮ ಪ್ರೇಮಿಯ ಮಾತುಗಳಿಗೆ ನೀವು ತುಂಬ ಸಂವೇದನಾಶೀಲರಾಗಿರುತ್ತೀರಿ. ನೀವು ನಿಮ್ಮ ಭಾವನೆಗಳನ್ನು ನಿಯಂತ್ರಣದಲ್ಲಿಟ್ಟುಕೊಳ್ಳಬೇಕು.

ಕುಂಭ



ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಪ್ರೇಮ ಜೀವನ ಇಂದು ಒಂದು ಸುಂದರ ತಿರುವನ್ನು ತೆಗೆದುಕೊಳ್ಳುತ್ತದೆ.

ಮೀನ



ತೊಂದರೆಗಳ ಬಗ್ಗೆ ಚಿಂತಿಸುವ ಮತ್ತು ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಸ್ನೇಹಿತರು ಮತ್ತು ಸಂಬಂಧಿಗಳು ಉಪಕಾರ ಮಾಡುತ್ತಾರೆ ಮತ್ತು ನೀವು ಅವರ ಸಂಗದಲ್ಲಿ ಸಾಕಷ್ಟು ಸಂತೋಷವಾಗಿರುವಿರಿ. ಕೆಲವರಿಗೆ ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು ಹಾಗೂ ನಿಮ್ಮನ್ನು ಹರ್ಷಚಿತ್ತರಾಗಿರಿಸಬಹುದು. ನಿಮ್ಮ ಕೆಲಸಗಳಿಗೆ ಬೇರೆಯವರು ಗೌರವ ಪಡೆಯಲು ಬಿಡಬೇಡಿ. ಪ್ರಯಾಣಕ್ಕೆ ಒಳ್ಳೆಯ ದಿನವಲ್ಲ, ನಿಮ್ಮ ವೈವಾಹಿಕ ಜೀವನ ಇಂದು ಮೋಜು, ಸಂತೋಷಬಗೆಗಾಗಿರುತ್ತದೆ.

ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ ಪರಿಸರ ಸಂರಕ್ಷಿಸೋಣ: ಜೆಸಿಐ



ಶಿವಮೊಗ್ಗ, ಸೆ.10: ಜೆಸಿಐ ಸಪ್ತಾಹದ ಅಂಗವಾಗಿ ಜೆಸಿಐ ಶಿವಮೊಗ್ಗ ರಾಯಲ್ಸ್ ಘಟಕದಿಂದ ಪರಿಸರ ಸಂರಕ್ಷಣೆ ಹಾಗೂ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ನಗರದ ಪುನೀತ್ ರಾಜ್‌ಕುಮಾರ್ ಉದ್ಯಾನವನದಲ್ಲಿ ಶಿವಮೊಗ್ಗ ನಗರದ ಪೌರ ಕಾರ್ಮಿಕರಿಗೆ ಸ್ಟೀಲ್ ಬಾಟಲಿಗಳನ್ನು ವಿತರಿಸಲಾಯಿತು.

ನಗರವನ್ನು ಸ್ವಚ್ಛ ಹಾಗೂ ಸುಂದರವಾಗಿಡುವಲ್ಲಿ ಪೌರ ಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪ್ರತಿದಿನ ಸಾರ್ವಜನಿಕ ಸ್ಥಳಗಳು ಹಾಗೂ ರಸ್ತೆಗಳನ್ನು ಸ್ವಚ್ಛಗೊಳಿಸುವ ಮೂಲಕ ನಗರದ ಸ್ವಚ್ಛತೆ ಮತ್ತು ಆರೋಗ್ಯ ಕಾಪಾಡುವ ಪೌರ ಕಾರ್ಮಿಕರಿಗೆ ಉಪಯುಕ್ತವಾಗುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಜೆಸಿಐ ಶಿವಮೊಗ್ಗ ರಾಯಲ್ಸ್ ಸದಸ್ಯರು, ಪ್ಲಾಸ್ಟಿಕ್ ಬಳಕೆ ಭೂಮಿಗೂ ಹಾಗೂ ಜೀವ ಸಂಕುಲಕ್ಕೂ ಅಪಾಯಕಾರಿ. ಪ್ಲಾಸ್ಟಿಕ್ ತ್ಯಾಜ್ಯದಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದ್ದು, ಪ್ರತಿಯೊಬ್ಬರೂ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಿ ಪರಿಸರ ಸ್ನೇಹಿ ವಸ್ತುಗಳ ಬಳಕೆಗೆ ಆದ್ಯತೆ ನೀಡಬೇಕು. ಸಣ್ಣ ಸಣ್ಣ ಬದಲಾವಣೆಗಳ ಮೂಲಕ ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬಹುದು ಎಂದು ತಿಳಿಸಿದರು.

ಪ್ಲಾಸ್ಟಿಕ್ ಬಾಟಲಿಗಳ ಬದಲಿಗೆ ಮರುಬಳಕೆ ಮಾಡಬಹುದಾದ ಸ್ಟೀಲ್ ಬಾಟಲಿಗಳ ಬಳಕೆಯನ್ನು ಉತ್ತೇಜಿಸುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶವನ್ನು ಸಾರಲಾಯಿತು. ಜೆಸಿಐ ಸಪ್ತಾಹದ ವಿವಿಧ ಸಮಾಜಮುಖಿ ಕಾರ್ಯಕ್ರಮಗಳ ಭಾಗವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಚಿರಂಜೀವಿ ಬಾಬು, ಗೌರೀಶ್ ಭಾರ್ಗವ್, ಆದರ್ಶ್, ಪ್ರಮೋದ್ ಶಾಸ್ತ್ರಿ ಸುದರ್ಶನ್ ತಾಯಿಮನೆ, ಗಾನವಿ, ಶ್ವೇತಾ ಪ್ರಶಾಂತ್, ತೇಜಸ್ವಿನಿ, ಪೂರ್ಣಿಮಾ, ಹೇಮಲತಾ, ಪ್ರೀತಿ, ದೇವಿಕಾ ಮಹದೇವ, ಸಂದೇಶ್, ಮೋಹನ್, ಸ್ಮಿತಾ ಸೇರಿದಂತೆ ಜೆಸಿಐ ಶಿವಮೊಗ್ಗ ರಾಯಲ್ಸ್ ಘಟಕದ ಸದಸ್ಯರು ಉಪಸ್ಥಿತರಿದ್ದರು.

ಸವಿತಾ ಸಮಾಜದ ಅಭಿವೃದ್ಧಿ ನಿಗಮದಿಂದ ಅರ್ಜಿ

(ಹೊಸನಾವಿಕ)

ಶಿವಮೊಗ್ಗ, ಸೆ.10: ಕರ್ನಾಟಕ ಸವಿತಾ ಸಮಾಜದ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ವಿವಿಧ ಯೋಜನೆಗಳಡಿ ಸೌಲಭ್ಯ ನೀಡಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಸಾಲ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆಯಲು ಹಿಂದುಳಿದ ವರ್ಗಗಳ ಸೇರಿದ ಸವಿತಾ ಸಮಾಜ ಮತ್ತು ಅದರ ಉಪಜಾತಿಗಳಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಹಟ್ಟಿಗೊಲ್ಲ, ಮರಾಠ, ಈಡಿಗ, ತಿಗಳ, ಕುಂಬಾರ, ಹಡಪದ, ಗಾಣಿಕ ಮತ್ತು ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ) ಸಮುದಾಯಗಳ ಆಸಕ್ತರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಅಬಹುದು.

ಈ ಮೇಲಿನ ಎಲ್ಲಾ ಯೋಜನೆಗಳ ಸೌಲಭ್ಯವನ್ನು ಪಡೆಯಲು ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು ಮತ್ತು ಇತರೆ ದಾಖಾಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದೂ ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ, 2024-25 ಮತ್ತು 2025-26 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಆಸಕ್ತರು ಸೇವಾಸಿಂಧು ಪೋರ್ಟಲ್ http:/ sevasindhu.karnataka.gov.in ಮುಖಾಂತರ ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾಕೇಂದ್ರಗಳಲ್ಲಿ ದಾಖಲೆಗಳ ಸಹಿತ ದಿ:01/10/2026 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.kssd.karnataka.gov.in, ಫೋ: 080-22374832/ 8050770004/8050770005 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ದೇವರಾಜ ಅರಸು ಭವನ, ಬಾಲರಾಜ್ ಅರಸು ರಸ್ತೆ, ಕೆ.ಇ.ಬಿ. ಸರ್ಕಲ್ ಹತ್ತಿರ, ಶಿವಮೊಗ್ಗ ಕಛೇರಿ ಫೋ 08182 -229634ನ್ನು ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಪಿಎಂ-ಕಿಸಾನ್ ಯೋಜನೆ: ಶಿವಮೊಗ್ಗ ಜಿಲ್ಲೆಯ ರೈತರಿಗೆ ಪ್ರತಿ ವರ್ಷ ಬಯೋಮೆಟ್ರಿಕ್ ಇ-ಕೆವೈಸಿ ಕಡ್ಡಾಯ

(ಹೊಸನಾವಿಕ)

ಶಿವಮೊಗ್ಗ, ಸೆ.10: ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಪ್ರೋತ್ಸಾಹಧನ ಪಡೆಯುತ್ತಿರುವ ಅರ್ಹ ರೈತರು ಪ್ರತಿ ವರ್ಷ ಬಯೋಮೆಟ್ರಿಕ್ ಇ-ಕೆವೈಸಿ ಮಾಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಶಿವಮೊಗ್ಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಮಾರ್ಗದರ್ಶನದಂತೆ 01-02-2019ರ ಪೂರ್ವದಲ್ಲಿ ಭೂ ಒಡೆತನ ಹೊಂದಿರುವ ಪ್ರತಿ ಅರ್ಹ ರೈತ ಕುಟುಂಬಕ್ಕೆ ವರ್ಷಕ್ಕೆ ಒಟ್ಟು ರೂ. 6,000 ರೂ.ಗಳನ್ನು ಪ್ರತಿ 4 ತಿಂಗಳಿಗೊಮ್ಮೆ ರೂ. 2,000 ರೂ.ಗಳಂತೆ 3 ಕಂತುಗಳಲ್ಲಿ ನೀಡಲಾಗುತ್ತಿದೆ. ಈ ಪ್ರೋತ್ಸಾಹಧನವನ್ನು ಮುಂದುವರಿಸಲು ಫ್ರೂಟ್ಸ್ ತಂತ್ರಾಂಶದ ಗುರುತಿನ ಸಂಖ್ಯೆಯಂತೆ ಕೇಂದ್ರ ಸರ್ಕಾರವು ಅಗ್ರಿಸ್ಟ್ಯಾಕ್ ಯೋಜನೆಯಡಿ ಗುರುತಿನ ಸಂಖ್ಯೆಯನ್ನು ಸೃಷ್ಟಿಸುವುದು ಕಡ್ಡಾಯವಾಗಿದೆ.

ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಸ್ತುತ ಪಿ.ಎಂ.ಕಿಸಾನ್ ಯೋಜನೆಯಡಿ ಒಟ್ಟು 1,36,616 ಫಲಾನುಭವಿಗಳಿದ್ದಾರೆ. ತಾಲ್ಲೂಕುವಾರು ವಿವರ ಹೀಗಿದೆ: ಶಿವಮೊಗ್ಗ-18,065, ಭದ್ರಾವತಿ -18,920, ತೀರ್ಥಹಳ್ಳಿ -16,216, ಸಾಗರ-19,916, ಹೊಸನಗರ-12,634, ಶಿಕಾರಿಪುರ- 25,196 ಹಾಗೂ ಸೊರಬ-25,669. ಈ ಪೈಕಿ ಇ-ಕೆವೈಸಿ ಬಾಕಿ ಇರುವ ರೈತರು ಕೂಡಲೇ ಅದನ್ನು ಪೂರ್ಣಗೊಳಿಸಬೇಕಾಗಿದೆ.

ಇ-ಕೆವೈಸಿ ಮಾಡಿಸುವ ವಿಧಾನ: ರೈತರು ಎರಡು ವಿಧಾನಗಳ ಮೂಲಕ ಇ-ಕೆವೈಸಿ ಪೂರ್ಣಗೊಳಿಸಬಹುದು:

ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಿಗೆ (ಸಿಎಸ್ ಸಿ) ಭೇಟಿ ನೀಡಿ ಬಯೋಮೆಟ್ರಿಕ್ ಆಧಾರಿತ ಇ-ಕೆವೈಸಿ ಮಾಡಿಸಬಹುದು.

ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ 'PMKISAN e-KYC through Face Recognition App' ಮೂಲಕ ಮುಖ (ಫೇಸ್) ದೃಢೀಕರಣದ ಆಧಾರದ ಮೇಲೆಯೂ ರೈತ ಸಂಪರ್ಕ ಕೇಂದ್ರಗಳಲ್ಲಿ ಇ-ಕೆವೈಸಿ ಮಾಡಿಕೊಳ್ಳಬಹುದು.

ಆದ್ದರಿಂದ ಜಿಲ್ಲೆಯ ಫಲಾನುಭವಿ ರೈತರು ತಮ್ಮ ಆಧಾರ್ ಕಾರ್ಡ್‌ನೊಂದಿಗೆ ಹತ್ತಿರದ ಸಾಮಾನ್ಯ ಸೇವಾ ಕೇಂದ್ರ ಅಥವಾ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಬಾಕಿ ಇರುವ ಇ-ಕೆವೈಸಿಯನ್ನು ತಕ್ಷಣವೇ ಪೂರ್ಣಗೊಳಿಸಿಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

ಅರೆಕಾಲಿಕ ಕಾನೂನು ಸ್ವಯಂ ಸೇವಕರು ಸಮಾಜ ಮತ್ತು ಪ್ರಾಧಿಕಾರದ ನಡುವೆ ಸೇತುವೆ: ನ್ಯಾ. ಅಭಯ್ ಚೌಗಲಾ

(ಹೊಸನಾವಿಕ)

ಶಿವಮೊಗ್ಗ, ಸೆ.10: ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನು ಅರಿವು ಹಾಗೂ ಉಚಿತ ನ್ಯಾಯ ಒದಗಿಸುವಲ್ಲಿ ಅರೆಕಾಲಿಕ ಕಾನೂನು ಸ್ವಯಂಸೇವಕರು ಸಮಾಜ ಮತ್ತು ಕಾನೂನು ಸೇವೆಗಳ ಪ್ರಾಧಿಕಾರದ ನಡುವೆ ಸೇತುವೆಯಂತೆ ಕಾರ್ಯನಿರ್ವಹಿಸುತ್ತಾರೆ ಎಂದು ಶಿವಮೊಗ್ಗ ಜಿಲ್ಲೆಯ ಒಂದನೇ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಪ್ರಭಾರ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಅಭಯ್ ಡಿ. ಚೌಗಲಾ ತಿಳಿಸಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಶಿವಮೊಗ್ಗ, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಬೆಂಗಳೂರಿನ 'ಔಟ್ ಲಾಡ್ ಇಂಡಿಯಾ' ಸಂಸ್ಥೆಯ ಸಹಯೋಗದಲ್ಲಿ ಸಿಮ್ಸ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅರೆಕಾಲಿಕ ಕಾನೂನು ಸ್ವಯಂ ಸೇವಕರ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಯ ನಿಮ್ಮದು ನೆರವು ನಮ್ಮದು ಎಂಬ ಧ್ಯೇಯವಾಕ್ಯದಡಿ ಕಾರ್ಯನಿರ್ವಹಿಸುವ ಪ್ರಾಧಿಕಾರದ ಸೇವೆಗಳನ್ನು ಸಾರ್ವಜನಿಕರಿಗೆ ತಲುಪಿಸುವುದು ಸ್ವಯಂ ಸೇವಕರ ಮುಖ್ಯ ಕರ್ತವ್ಯವಾಗಿದೆ. ಪೊಲೀಸ್ ಠಾಣೆಗಳಲ್ಲಿ ನಿಯೋಜನೆಗೊಂಡು ಸಂತ್ರಸ್ತರಿಗೆ ನೆರವಾಗುವುದು, ಪೋಕ್ಸೋ ಪ್ರಕರಣಗಳಲ್ಲಿ ನೊಂದವರಿಗೆ ಬೆಂಬಲ ವ್ಯಕ್ತಿಯಾಗಿ ಕಾರ್ಯನಿರ್ವಹಿಸುವುದು ಮತ್ತು ಕಾನೂನು ಜಾಗೃತಿ ಮೂಡಿಸುವ ಗುರುತರ ಜವಾಬ್ದಾರಿ ಪಿ.ಎಲ್.ವಿ.ಗಳ ಮೇಲಿದೆ.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸಂತೋಷ್ ಎಂ.ಎಸ್. ಅವರು, ಈಗಾಗಲೇ ನೀಡಲಾದ 4 ದಿನಗಳ ತರಬೇತಿಯ ಮುಂದುವರಿದ ಭಾಗವಾಗಿ ಈ 2 ದಿನಗಳ ಪುನಶ್ಚೇತನ ತರಬೇತಿಯನ್ನು ಆಯೋಜಿಸಲಾಗಿದ್ದು, ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಈ ತರಬೇತಿ ಕಾರ್ಯಾಗಾರದಲ್ಲಿ ಶಿವಮೊಗ್ಗ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ 178 ಅರೆಕಾಲಿಕ ಕಾನೂನು ಸ್ವಯಂ ಸೇವಕರು ಭಾಗವಹಿಸಿದ್ದರು. ಪೊಲೀಸ್ ಇಲಾಖೆ, ಅಭಿಯೋಜನೆ ಇಲಾಖೆ, ಮಕ್ಕಳ ಕಲ್ಯಾಣ ಸಮಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪ್ಯಾನಲ್ ವಕೀಲರು ಹಾಗೂ ಎಲ್ ಎ ಡಿ ಸಿ ವಕೀಲರ ನೇತೃತ್ವದಲ್ಲಿ ಸಂವಾದ ಮತ್ತು ತರಬೇತಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಸಿಮ್ಸ್ ನಿರ್ದೇಶಕರಾದ ಡಾ. ರಮೇಶ್ ಬಾಬು ಕೆ., ತರಬೇತುದಾರರಾದ ಕುಮಾರಿ ತುಷಿತ ಗಾಯತ್ರಿ ಹಾಗೂ ಕುಮಾರಿ ವೈಷ್ಣವಿ ತಿವಾರಿ ಉಪಸ್ಥಿತರಿದ್ದರು.

ಈಸೂರಿನಿಂದ ಶಿಕಾರಿಪುರದವರೆಗೆ ಪಾದಯಾತ್ರೆ

(ಮೊದಲ ಪುಟದಿಂದ)

ಹಿತದ ವಿಚಾರದಲ್ಲಿ ಸರ್ಕಾರ ಗಂಭೀರವಾಗಿ ಸ್ಪಂದಿಸುತ್ತಿರುವುದು ಸ್ವಾಗತಾರ್ಹ ಎಂದರು.

ವರದಿ ಕುರಿತು ಬಿಜೆಪಿಯವರು ಮೊದಲು ತಮ್ಮ ನಿಲುವು ಸ್ಪಷ್ಟಪಡಿಸಬೇಕು. ತಲೆಬುಡವಿಲ್ಲದೆ ಪಾದಯಾತ್ರೆ ನಡೆಸುವುದರಿಂದ ಯಾವುದೇ ಪ್ರಯೋಜನವಿಲ್ಲ. ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ಕೇಂದ್ರ ಸರ್ಕಾರದ ಮುಂದೆ ತಮ್ಮ ನಿಲುವು ಸ್ಪಷ್ಟಪಡಿಸಲಿ ಎಂದು ಸವಾಲು ಹಾಕಿದರು.

ಕಾಡು ಉಳಿಯಬೇಕು, ರೈತರು ಉಳಿಯಬೇಕು, ಪರಿಸರವೂ ಉಳಿಯಬೇಕು ಹಾಗೂ ಮಲೆನಾಡಿನ ಜನರ ಬದುಕು ಉಳಿಯಬೇಕು. ಇದೇ ಕಾಂಗ್ರೆಸ್ ಪಕ್ಷದ ಗುರಿ. ಪರಿಸರ ಸಂರಕ್ಷಣೆಯ ಹೆಸರಿನಲ್ಲಿ ರೈತರ ಬದುಕನ್ನು ಅತಂತ್ರಗೊಳಿಸಲು ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಮಧು ಬಂಗಾರಪ್ಪ ಅವರು ಸ್ಪಷ್ಟಪಡಿಸಿದರು.



ಏರ್‌ಪೋರ್ಟ್‌ನಲ್ಲಿ ಕಣ್ಣಿಗೆ ಬಿದ್ದ ಹೃದಯವಂತೆ ನೀನು...



ಜೀವನವೆಂದರೆ ಕೇವಲ ನಗುವಿನ ಹಾದಿಯಲ್ಲ. ಕೆಲವೊಮ್ಮೆ ಯಾವುದೇ ಕಾರಣವಿಲ್ಲದೆ ಕಣ್ಣಂಚು ಒದ್ದೆಯಾಗುತ್ತದೆ. ಯಾರಿಗೂ ಹೇಳಲಾಗದ ನೋವುಗಳು ಮನಸ್ಸಿನ ಯಾವುದೋ ಮೂಲೆಯಲ್ಲಿ ಮೌನವಾಗಿ ಕುಳಿತುಕೊಳ್ಳುತ್ತವೆ. ಅದೇಕೋ ಆ ಕ್ಷಣಗಳಲ್ಲಿ ಮಾತುಗಳಿಗಿಂತಲೂ ನಮ್ಮ ಮೌನವನ್ನು ಅರ್ಥಮಾಡಿಕೊಳ್ಳುವ ಒಬ್ಬಳು ಗೆಳತಿ ಬೇಕೆನಿಸುತ್ತದೆ.

ಇರಬೇಕು ಒಬ್ಬಳು ಗೆಳತಿ...

ನಮ್ಮ ನೋವುಗಳನ್ನೆಲ್ಲ ಹಂಚಿಕೊಳ್ಳಲು, ಮನಸ್ಸಿನ ಭಾಷೆಯನ್ನು ಮನಸಿನಿಂದಲೇ ಅರ್ಥೈಸಿಕೊಳ್ಳಲು. ಕಣ್ಣೀರು ಕೆನ್ನೆಯ ಮೇಲೆ ಜಾರುವ ಮೊದಲೇ ಅದನ್ನು ತಡೆಯುವ ಕೈಯಾಗಬೇಕು. ಹೇಳದ ಮಾತುಗಳನ್ನೂ ಕೇಳಿ ತಿಳಿಯುವ ಕಿವಿಯಾಗಬೇಕು. ನಗುವಿನ ಹಿಂದೆ ಮರೆಮಾಚಿದ ದುಃಖವನ್ನು ಕಣ್ಣಲ್ಲೇ ಓದಿಬಿಡುವ ಮನಸ್ಸಾಗಬೇಕು.

ಅಂಥವಳ ಮುಂದೆ ಏನನ್ನೂ ವಿವರಿಸಬೇಕಾಗಿಲ್ಲ,

ಯಾಕೆ.. ಏನಾಯಿತು...? ಎನ್ನುವ ಪ್ರಶ್ನೆಗಳಿಗಿಂತ, ಸುಮ್ಮನೆ ಪಕ್ಕದಲ್ಲಿ ಕುಳಿತುಕೊಳ್ಳುವ ಅವಳ ಸಾನ್ನಿಧ್ಯವೇ ಸಾವಿರ ಮಾತುಗಳ ಸಾಂತ್ವನವಾಗುತ್ತದೆ. ಜಗತ್ತೇ ನಮ್ಮನ್ನು ಬಿಟ್ಟು ದೂರ ಸರಿದಂತೆ ಅನಿಸಿದಾಗ,

ನಾನು ಇದ್ದೀನಿ ಕಣೋ..

ಎನ್ನುವ ಒಂದೇ ಒಂದು ಮಾತು ಎದೆಯೊಳಗೆ ಮತ್ತೆ ಬದುಕುವ ಧೈರ್ಯ ತುಂಬುತ್ತದೆ.

ಅವಳ ಜೊತೆಯಿದ್ದರೆ ಬದುಕಿನ ಕಠಿಣ ಹಾದಿಗಳೂ ಕೊಂಚ ಸುಲಭವೆನಿಸುತ್ತವೆ. ನಮ್ಮ ನೋವನ್ನು ತನ್ನದೇ ನೋವಿನಂತೆ ತಬ್ಬಿಕೊಂಡು, ಎಲ್ಲವೂ ಸರಿಯಾಗುತ್ತದೆ ಎಂದು ಹೃದಯವನ್ನು ಮುದ್ದಿಸುವ ಗೆಳತಿ ಸಿಕ್ಕರೆ ಅದಕ್ಕಿಂತ ದೊಡ್ಡ ಅದೃಷ್ಟ ಮತ್ತೇನಿದೆ.

ಅದೇನೋ ಮನಸ್ಸಿನ ಯಾವುದೋ ಮೂಲೆಯಲ್ಲಿ ಮೃದುವಾಗಿ ಕೇಳಿಬರುವಂತೆ ಅನಿಸುತಿದೆ ಯಾಕೋ ಇಂದು ನೀನೇನೆ ನನ್ನವಳೆಂದು ಎಂಬ ಹಾಡಿನ ಸಾಲುಗಳು ಅವಳನ್ನು ಕಂಡ ಕ್ಷಣಕ್ಕೆ ಹೊಸ ಅರ್ಥ ಪಡೆದುಕೊಳ್ಳುತ್ತವೆ.

ಅವಳು ಕೇವಲ ಪರಿಚಯವಲ್ಲ, ಪರಿಚಯದಾಚೆಗಿನ ಒಂದು ಆತ್ಮೀಯತೆ. ಹೆಸರಿಡಲಾಗದ, ಆದರೆ ಹೃದಯಕ್ಕೆ ಮಾತ್ರ ಸ್ಪಷ್ಟವಾಗಿ ಅರ್ಥವಾಗುವ ಒಂದು ಸತ್ಸಂಬಂಧ.

ಅಂದು ಉದ್ಯೋಗದ ನಿಮಿತ್ತ ದೂರದ ದೇಶಕ್ಕೆ ಪ್ರಯಾಣ ಹೊರಟಾಗ, ಏರ್‌ಪೋರ್ಟ್‌ನ ಬೆಂಚಿನ ಮೇಲೆ ಏಕಾಂಗಿಯಾಗಿ ಕುಳಿತಿದ್ದೆ. ಮನಸ್ಸಿನಲ್ಲಿ ಒಂದು ರೀತಿಯ ಆತಂಕ..., ಭಯ... ಸುತ್ತಲೂ ಎಷ್ಟೋ ಮುಖಗಳು. ಎಷ್ಟೋ ಜನರ ಓಡಾಟ. ಎಷ್ಟೋ ಹೆಜ್ಜೆಗಳು ಬಂದು ಹೋಗುತ್ತಿದ್ದವು. ಆದರೆ ಅವುಗಳ ನಡುವೆ ನನ್ನ ಕಣ್ಣಿಗೆ ಬಿದ್ದದ್ದು ಕೇವಲ ಒಂದು ಮುಖವಲ್ಲ, ಅದೊಂದು ಭರವಸೆ. ಒಂಟಿತನದ ನಡುವೆ ನನಗೆ ಸಿಕ್ಕ ಸಣ್ಣ ಬೆಳಕು. ಹೇಳದೆ ಹೇಳುವ ಸ್ನೇಹ. ಹೃದಯಕ್ಕೆ ಹತ್ತಿರವಾದ ಒಂದು ಜೀವ.

ಮೊದಲ ಭೇಟಿಯಲ್ಲೇ ಹೃದಯಕ್ಕೆ ಇಷ್ಟು ಹತ್ತಿರವಾಗುವವರು ಕೆಲವರೇ. ಅವರೊಂದಿಗೆ ಕಳೆದ ಕ್ಷಣಗಳು ಕಡಿಮೆಯಾದರೂ, ನೆನಪುಗಳು ಮಾತ್ರ ದೀರ್ಘವಾಗಿರುತ್ತವೆ. ಮಾತುಗಳು ಮರೆತುಹೋದರೂ, ಅವರು ಕೊಟ್ಟ ನೆಮ್ಮದಿ ಮಾತ್ರ ಎಂದಿಗೂ ಮರೆಯಾಗುವುದಿಲ್ಲ. ಕೆಲವೊಮ್ಮೆ ಅವಳ ನಗು ನೋಡಿದಾಗ ಕೈಫಿ ಅಜ್ಮಿ ಅವರು ರಚಿಸಿದ, ಖ್ಯಾತ ಗಾಯಕ ಜಗಜಿತ್ ಸಿಂಗ್ ಅವರು ಹಾಡಿದ ಅರ್ಥ್ ಸಿನಿಮಾದ ಹಾಡು ನೆನಪಿಗೆ ಬರುತ್ತದೆ.

ತುಮ್ ಇಟ್ನಾ ಜೋ ಮುಸ್ಕುರಾ ರಹೇ ಹೋ,

ಕ್ಯಾ ಘಮ್ ಹೈ ಜಿಸ್ಕೋ ಛುಪಾ ರಹೇ ಹೋ..

ನಗುವಿನ ಹಿಂದೆ ಏನಿದೆ ಎಂದು ತಿಳಿಯಬೇಕೆನಿಸುತ್ತದೆ. ಅವಳ ನೋವುಗಳನ್ನೂ ನನ್ನದಾಗಿಸಿಕೊಳ್ಳಬೇಕೆನಿಸುತ್ತದೆ. ಏಕೆಂದರೆ ನಿಜವಾದ ಸ್ನೇಹವೆಂದರೆ ಕೇವಲ ಸಂತೋಷದಲ್ಲಿ ಜೊತೆಯಾಗಿರುವುದಲ್ಲ, ಒಬ್ಬರ ಕಣ್ಣೀರಿನ ತೂಕವನ್ನು ಮತ್ತೊಬ್ಬರು ಅರಿತುಕೊಳ್ಳುವುದೂ ಹೌದು.

ಜೀವನದ ಪುಸ್ತಕದಲ್ಲಿ ಕೆಲವು ಪುಟಗಳು ನಮಗೆ ಇಷ್ಟವಾಗದಿದ್ದರೂ, ಅವುಗಳ ನಡುವೆ ಒಂದು ಸುಂದರ ಸಾಲಿನಂತೆ ಬರುವವರು ಇಂಥ ಗೆಳತಿಯರು. ಅವರು ಬಂದ ಮೇಲೆ ಸಮಸ್ಯೆಗಳು ಮಾಯವಾಗುವುದಿಲ್ಲ, ಆದರೆ ಅವುಗಳನ್ನು ಎದುರಿಸುವ ಮನಸ್ಸು ಮಾತ್ರ ಬಲವಾಗುತ್ತದೆ.

ಒಂಟಿತನದ ಮಧ್ಯೆ ಮನಸ್ಸು ಹಗುರವಾಗುತ್ತದೆ. ನೋವಿನ ನಡುವೆ ನಗು ಅರಳುತ್ತದೆ. ಕತ್ತಲೆಯ ಹಾದಿಯಲ್ಲೂ ಜೊತೆಯಾಗಿ ನಡೆಯುವ ಹೆಜ್ಜೆಯೊಂದು ಸಿಕ್ಕಂತಾಗುತ್ತದೆ.

ಅದಕ್ಕೇ ಅನಿಸುತ್ತದೆ, ಬಾಳಿನಲ್ಲಿ ಎಲ್ಲರೂ ಬೇಕೆಂದಿಲ್ಲ, ನಮ್ಮ ಮನಸ್ಸನ್ನು ಕೇಳುವ ಒಬ್ಬಳು, ಕಣ್ಣೀರನ್ನು ಅರ್ಥಮಾಡಿಕೊಳ್ಳುವ ಒಬ್ಬಳು, ಕುಸಿದಾಗ ಕೈ ಹಿಡಿಯುವ ಒಬ್ಬಳು, ಜಗವೇ ದೂರವಾದರೂ ನಾನು ಇದ್ದೀನಿ ಎಂದು ಹೇಳುವ ಒಬ್ಬಳು ಗೆಳತಿ ಇದ್ದರೆ ಸಾಕು.

ಆಗ ಬದುಕು ಕೇವಲ ಬದುಕಾಗಿರುವುದಿಲ್ಲ, ಒಂದು ಸುಂದರ ಕವಿತೆಯಾಗುತ್ತದೆ.

ಆ ಕವಿತೆಯ ಮೊದಲ ಸಾಲು ಮಾತ್ರ ನನಗೆ ಇನ್ನೂ ಸ್ಪಷ್ಟವಾಗಿ ನೆನಪಿದೆ.

ಏರ್‌ಪೋರ್ಟ್‌ನಲ್ಲಿ ನನ್ನ ಕಣ್ಣಿಗೆ ಬಿದ್ದ ಹೃದಯವಂತೆ ನೀನು...

ಅಂಗನವಾಡಿ ನಮ್ಮ ಜವಾಬ್ದಾರಿ: ತಾಯಿ-ಮಗುವಿನ ಆರೋಗ್ಯಕ್ಕೆ ಆದ್ಯತೆ ನೀಡಿ

ಪೋಷಣ್ ಮಾಸಾಚರಣೆಯಲ್ಲಿ ಶ್ರೀಮತಿ ಭಾರತಿ ಬಣಕಾರ್



ಶಿವಮೊಗ್ಗ ಸೆ. 10: ಪೋಷಣ್ ಮಾಸಾಚರಣೆ ಅಂಗವಾಗಿ ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ ಹಾಗೂ ಪೌಷ್ಟಿಕ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಭಾರತಿ ಬಣಕಾರ್ ಉದ್ಘಾಟಿಸಿದರು.

ನಗರದ ರವೀಂದ್ರ ನಗರದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದ ಸರಸ್ವತಿ ಮಂದಿರದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಐಸಿಡಿಎಸ್) ಹಾಗೂ ಕೇಂದ್ರ ಸಂವಹನ ಇಲಾಖೆ, ಶಿವಮೊಗ್ಗ ಇವರ ಆಶ್ರಯದಲ್ಲಿ 2026-27ನೇ ಸಾಲಿನ ಪೋಷಣ್ ಅಭಿಯಾನದಡಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಭಾರತಿ ಬಣಕಾರ್, ಕೇಂದ್ರ ಸರ್ಕಾರದ ನಿರ್ದೇಶನದಂತೆ ಸೆ.9ರಿಂದ ಅ. 8ರವರೆಗೆ ನಡೆಯುವ ಪೋಷಣ್ ಮಾಸಾಚರಣೆಯಲ್ಲಿ ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ವಿಶೇಷವಾಗಿ ತಾಯಿ ಮತ್ತು ಮಗುವಿನ ಆರೋಗ್ಯ, ಪೌಷ್ಟಿಕತೆ ಹಾಗೂ ಆರೈಕೆಯ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯ ಎಂದು ಹೇಳಿದರು.

ಬೊಮ್ಮನಕಟ್ಟೆನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಉಮಾ ಎಚ್.ಎಂ. ಅವರು ಪೌಷ್ಟಿಕತೆ ಮತ್ತು ಆರೋಗ್ಯದ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕೇಂದ್ರ ಸಂವಹನ ಇಲಾಖೆಯ ಸಿ.ವಿ. ಲಕ್ಷ್ಮಿಕಾಂತ್ ಮಾತನಾಡಿ, ಆರೋಗ್ಯವಂತ ಸಮಾಜ ನಿರ್ಮಾಣದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವದ್ದಾಗಿದೆ ಎಂದು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಸುಕನ್ಯಾ ಸಮೃದ್ಧಿ ಯೋಜನೆಯ ಫಲಾನುಭವಿಗಳಿಗೆ ಪಾಸ್‌ಬುಕ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಮೊಗ್ಗ ಜಿಲ್ಲಾ ನಿರೂಪಣಾಧಿಕಾರಿ ಶ್ರೀಮತಿ ಕವಿತಾ ಟಿ.ಎನ್., ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಗಂಗಾಬಾಯಿ ಸಿ., ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಅಕ್ಷಯ, ಸಂರಕ್ಷಣಾಧಿಕಾರಿ ಶ್ರೀಮತಿ ಸರಸ್ವತಿ ಪಿ. ರೆಡ್ಡಿ, ಹಿರಿಯ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಹಿರಿಯ ಮೇಲ್ವಿಚಾರಕಿ ಶ್ರೀಮತಿ ರೇಖಾ ಕಾರ್ಯಕ್ರಮ ನಿರೂಪಿಸಿದರು.

ಶಿಕಾರಿಪುರ ಬ್ಲಾಕ್ ಕಾಂಗ್ರೆಸ್ ನೂತನ ಅಧ್ಯಕ್ಷರಾಗಿ

ಮಾಲತೇಶ್ ಭಂಡಾರಿ ನೇಮಕ



(ಹೊಸನಾವಿಕ)

ಶಿಕಾರಿಪುರ, ಸೆ.10: ಬ್ಲಾಕ್ ಕಾಂಗ್ರೆಸ್ ನೂತನ ಅಧ್ಯಕ್ಷರಾಗಿ ಮಾಲತೇಶ ಭಂಡಾರಿ ಅವರನ್ನು ನೇಮಕಗೊಳಿಸಿ ರಾಜ್ಯಾಧ್ಯಕ್ಷರಾದ ಬಿ.ಕೆ ಹರಿಪ್ರಸಾದ್ ಆದೇಶ ಹೊರಡಿಸಿದ್ದಾರೆ.

ಈಗಾಗಲೇ ಪಕ್ಷದ ಯುವ ಘಟಕದ ಅಧ್ಯಕ್ಷರಾಗಿ, ಜಿಲ್ಲಾ ಸಮಿತಿ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿ ಅನುಭವ ಹೊಂದಿರುವ ಮಾಲತೇಶ ಅವರನ್ನು ಇದೀಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ನೇಮಕಗೊಳಿಸುವ ಮೂಲಕ ರಾಜ್ಯಾಧ್ಯಕ್ಷರು ಪಕ್ಷ ಸಂಘಟನೆಗೆ ಶ್ರಮಿಸುವಂತೆ ಸೂಚಿಸಿದ್ದಾರೆ. ಬ್ಲಾಕ್ ಅಧ್ಯಕ್ಷರಾಗಿ ನೇಮಕಗೊಳಿಸಿದ ಬಗ್ಗೆ ಅತೀವ ಸಂತಸ ವ್ಯಕ್ತಪಡಿಸಿ ಪ್ರತಿಕ್ರಿಯಿಸಿದ ಮಾಲತೇಶ್, ಈಗಾಗಲೇ ಪಕ್ಷದ ಹಲವು ಹಂತದಲ್ಲಿ ಪಕ್ಷ ಸಂಘಟನೆಗಾಗಿ ಶ್ರಮಿಸಿದ ನನ್ನ ಕಾರ್ಯವೈಖರಿಯನ್ನು ಗಮನಿಸಿ ಜವಾಬ್ದಾರಿಯುತ ಅಧ್ಯಕ್ಷ ಸ್ಥಾನವನ್ನು ನೀಡಿದ ಪಕ್ಷದ ರಾಜ್ಯಾಧ್ಯಕ್ಷರ ಸಹಿತ ಸರ್ವರಿಗೂ ಅಭಿನಂದನೆಗಳು ಎಂದು ತಿಳಿಸಿದರು.

ಕಳೆದ 25 ವರ್ಷಗಳಿಂದ ಸತತವಾಗಿ ತಾಲೂಕು ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ವಿವಿಧ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಹಿರಿಯರ ಜೊತೆಗಿನ ಒಡನಾಟ ಸಂಪರ್ಕ ದಿಂದ ಹೆಚ್ಚಿನ ಅನುಭವ ಪಡೆದಿದ್ದೇನೆ. ಮುಂದಿನ ದಿನದಲ್ಲಿ ತಾಲೂಕಿನಲ್ಲಿ ಪಕ್ಷದ ಬಲವರ್ಧನೆಗೆ ಶ್ರಮಿಸುವುದಾಗಿ ಅವರು ತಿಳಿಸಿದರು.

ಕೇಂದ್ರದ ಕಸ್ತೂರಿ ರಂಗನ್ ವರದಿ ವಿರೋಧಿಸಿ ರೈತರ ಪರವಾಗಿ ಹೋರಾಟ ಹಮ್ಮಿಕೊಳ್ಳುವುದಾಗಿ ತಿಳಿಸಿದ ಅವರು, ರಾಜ್ಯ ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಆರೋಪ ಹೊರಿಸಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಮ್ಮಿಕೊಂಡಿರುವ ಪಾದಯಾತ್ರೆ ಹಾಸ್ಯಾಸ್ಪದವಾಗಿದೆ ಎಂದು ಅವರು ಟೀಕಿಸಿದರು.

ಸರ್ಕಾರಿ ಶಾಲೆಗಳ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರಿಗೆ ಕಾರ್ಯಾಗಾರ



ಶಿವಮೊಗ್ಗ, ಸೆ.10: ಸರ್ಕಾರಿ ಶಾಲೆಗಳ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷರು ಹಾಗೂ ಸದಸ್ಯರಿಗೆ ಅವರ ಜವಾಬ್ದಾರಿ ಮತ್ತು ಕರ್ತವ್ಯಗಳ ಕುರಿತು ಮಾಹಿತಿ ನೀಡುವ ಕಾರ್ಯಾಗಾರವು ನಗರದ ಸರ್ಕಿಟ್ ಹೌಸ್ ಪ್ರವಾಸಿ ಮಂದಿರದಲ್ಲಿ ನಡೆಯಿತು.

ಕಾರ್ಯಾಗಾರದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರ ಜವಾಬ್ದಾರಿಗಳು, ಶಾಲಾ ಅಭಿವೃದ್ಧಿಯಲ್ಲಿ ಅವರ ಪಾತ್ರ ಹಾಗೂ ಸಮಿತಿಯ ಕರ್ತವ್ಯಗಳ ಕುರಿತು ಸಂಪನ್ಮೂಲ ವ್ಯಕ್ತಿ ಜ್ಯೋತಿ ಜಯರಾಮ್ ಶೆಟ್ಟಿ ಮಾಹಿತಿ ನೀಡಿದರು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ಉಮೇಶ್ ಗಂಗಾವಾಡಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಕೀಲೆ ಸರೋಜಾ ಚಂಗೊಳ್ಳಿ ಭಾಗವಹಿಸಿದ್ದರು. ಜಿಲ್ಲಾ ಎಸ್‌ಡಿಎಂಸಿ ಪದಾಧಿಕಾರಿಗಳಾದ ಅಧ್ಯಕ್ಷ ಸತೀಶ್ ಬಿ.ಪಿ. ಹಾಗೂ ಕಾರ್ಯದರ್ಶಿ ಚಂದ್ರಶೇಖರ್ ಎಸ್. ಅವರ ಮುಂದಾಳತ್ವದಲ್ಲಿ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.

ಗಣೇಶ ವಿಸರ್ಜನೆಗೆ ತೆಪ್ಪ ಬಳಕೆ: ಡಿಸಿ ಕಟ್ಟುನಿಟ್ಟಿನ ಸೂಚನೆ

ಶಿವಮೊಗ್ಗ, ಸೆ.10: ಜಿಲ್ಲೆಯಲ್ಲಿ ಮುಂಬರುವ ಗಣೇಶ ಚತುರ್ಥಿ ಹಬ್ಬದ ಅಂಗವಾಗಿ ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಷ್ಠಾಪಿಸುವ ಗಣಪತಿ ಮೂರ್ತಿಗಳ ವಿಸರ್ಜನೆ ವೇಳೆ ಸಂಭವಿಸಬಹುದಾದ ಅನಾಹುತಗಳನ್ನು ತಡೆಯಲು ಹಾಗೂ ಸಾರ್ವಜನಿಕ ಶಾಂತಿ-ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಶಿವಮೊಗ್ಗ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಅವರು ಕಟ್ಟುನಿಟ್ಟಿನ ಆದೇಶ ಹೊರಡಿಸಿದ್ದಾರೆ.

ಸೆ.14 ರಿಂದ ಆರಂಭವಾಗುವ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಹೊಳೆ, ನದಿ, ಕೆರೆ ಹಾಗೂ ಹಿನ್ನೀರು ಪ್ರದೇಶಗಳಲ್ಲಿ ತೆಪ್ಪದ ಮೂಲಕ ಮೂರ್ತಿ ವಿಸರ್ಜನೆ ಮಾಡುವ ಸಂದರ್ಭದಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದು ಕಡ್ಡಾಯವಾಗಿದೆ. ಈ ಹಿಂದೆ ಶಿವಮೊಗ್ಗ ತಾಲೂಕಿನ ಹಾಡೋನಹಳ್ಳಿ ಗ್ರಾಮದಲ್ಲಿ ತೆಪ್ಪ ಮುಳುಗಿ 12 ಜನರು ಸಾವನ್ನಪ್ಪಿದ್ದ ದುರಂತ ಘಟನೆಯನ್ನು ಗಮನದಲ್ಲಿಟ್ಟುಕೊಂಡು, ಅಂತಹ ಅನಾಹುತಗಳು ಮರುಕಳಿಸದಂತೆ ತಡೆಯಲು ಈ ಸುರಕ್ಷತಾ ಮಾರ್ಗಸೂಚಿಗಳನ್ನು ವಿಧಿಸಲಾಗಿದೆ.

ತೆಪ್ಪದ ಮೂಲಕ ವಿಸರ್ಜನೆ ಮಾಡುವಾಗ ತೆಪ್ಪದಲ್ಲಿ ಕೇವಲ 2 ರಿಂದ 3 ಜನರಿಗೆ ಮಾತ್ರ ಹೋಗಲು ಅವಕಾಶವಿರುತ್ತದೆ. ತೆಪ್ಪದಲ್ಲಿ ತೆರಳುವ ಪ್ರತಿಯೊಬ್ಬರೂ ಕಡ್ಡಾಯವಾಗಿ ಲೈಫ್ ಜ್ಯಾಕೆಟ್ ಧರಿಸಿರಬೇಕು. ನುರಿತ ಈಜುಗಾರರ ಸಮಕ್ಷಮದಲ್ಲೇ ಗಣಪತಿ ಮೂರ್ತಿ ವಿಸರ್ಜನೆ ಪ್ರಕ್ರಿಯೆ ನಡೆಸತಕ್ಕದ್ದು.

ಕರ್ನಾಟಕ ಪೊಲೀಸ್ ಕಾಯ್ದೆ- 1963ರ ಕಲಂ 35 ಮತ್ತು 36ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶಿವಮೊಗ್ಗ ಜಿಲ್ಲಾ ಪೊಲೀಸ್ ಅಧೀಕ್ಷಕರ ಶಿಫಾರಸ್ಸಿನ ಮೇರೆಗೆ ಜಿಲ್ಲೆಯಾದ್ಯಂತ ಗಣೇಶಮೂರ್ತಿ ವಿಸರ್ಜನಾ ಮೆರವಣಿಗೆಗಳು ಸಂಪೂರ್ಣವಾಗಿ ಮುಕ್ತಾಯ ಗೊಳ್ಳುವವರೆಗೆ ಈ ಆದೇಶ ಜಾರಿಯಲ್ಲಿರಲಿದೆ ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

14 ಸಾಮಾನ್ಯ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ನಾಳೆ ನೇರ ಸಂದರ್ಶನ

(ಹೊಸನಾವಿಕ)

ಶಿವಮೊಗ್ಗ, ಸೆ.10: ಕರ್ನಾಟಕ ಸರ್ಕಾರ, ಜಿಪಂ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಶಿವಮೊಗ್ಗ ವತಿಯಿಂದ ಜಿಲ್ಲೆಯ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ 14 ಸಾಮಾನ್ಯ ವೈದ್ಯಾಧಿಕಾರಿ (ಎಂಬಿಬಿಎಸ್) ಹುದ್ದೆಗಳನ್ನು ತಾತ್ಕಾಲಿಕವಾಗಿ ಒಪ್ಪಂದ ಆಧಾರದ ಮೇಲೆ ಭರ್ತಿ ಮಾಡಲು ನೇರ ಸಂದರ್ಶನ ಕರೆಯಲಾಗಿದೆ.

ಗ್ರಾಮೀಣ ಪ್ರದೇಶದ ಜನರಿಗೆ ಉತ್ತಮ ಮತ್ತು ನಿರಂತರ ಆರೋಗ್ಯ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಮೆರಿಟ್ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಈ ನೇಮಕಾತಿಯನ್ನು ಮಾಡಿಕೊಳ್ಳಲಾಗುತ್ತಿದೆ.

ಸಂದರ್ಶನವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಬಿ.ಹೆಚ್. ರಸ್ತೆ, ಶಿವಮೊಗ್ಗ ಇಲ್ಲಿ ಸೆ.11ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಲಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ, ಜನ್ಮದಿನಾಂಕ, ಮೀಸಲಾತಿ ಪ್ರಮಾಣಪತ್ರಗಳು ಸೇರಿದಂತೆ ಎಲ್ಲಾ ಮೂಲ ದಾಖಲೆಗಳು, ಒಂದು ಸೆಟ್ ದೃಢೀಕೃತ ನಕಲು ಪ್ರತಿಗಳು ಮತ್ತು ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬೇಕಾಗಿ ವಿನಂತಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಕಚೇರಿಯನ್ನು ಖುದ್ದಾಗಿ ಸಂಪರ್ಕಿಸಬಹುದು ಅಥವಾ ಫೋ: 08182-222382 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಟರಾಜ್ ತಿಳಿಸಿದ್ದಾರೆ.

ಗಣೇಶ ಹಬ್ಬದ ಆಚರಣೆ ಮತ್ತು ಮೆರವಣಿಗೆ ವೇಳೆ ಡಿಜೆ ಸಿಸ್ಟಂ, ಬೈಕ್ ರ್ಯಾಲಿ ನಿಷೇಧಿಸಿ ಡಿಸಿ ಆದೇಶ

(ಹೊಸನಾವಿಕ)

ಶಿವಮೊಗ್ಗ ಸೆ.10: ಜಿಲ್ಲೆಯಲ್ಲಿ ಗಣೇಶ ಹಬ್ಬದ ಆಚರಣೆ ಮತ್ತು ಮೆರವಣಿಗೆಯ ಹಿನ್ನೆಲೆಯಲ್ಲಿ ಸಾರ್ವಜನಿಕರ ಶಾಂತಿ ಹಾಗೂ ಸೌಹಾರ್ದತೆ ಕಾಪಾಡುವ ಉದ್ದೇಶದಿಂದ ಸೆ.14 ರಿಂದ ಅ.13ರವರೆಗೆ 30 ದಿನಗಳ ಕಾಲ ಡಿಜೆ ಸಿಸ್ಟಂ, ಕಲರ್ ಪೇಪರ್ ಬ್ಲಾಸ್ಟಿಂಗ್, ಸಿಡಿಮದ್ದುಗಳನ್ನು ಸಿಡಿಸುವುದನ್ನು ಮತ್ತು ಬೈಕ್ ರ್ಯಾಲಿಗಳನ್ನು ನಿಷೇಧಿಸಿ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಆದೇಶ ಹೊರಡಿಸಿದ್ದಾರೆ.

ಸೆ.14 ರಂದು ಜಿಲ್ಲಾದ್ಯಂತ ಗಣೇಶ ಹಬ್ಬ ನಡೆಯಲಿದ್ದು, ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ, ವಯಸ್ಕರಿಗೆ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವ ರೋಗಿಗಳಿಗೆ ತೊಂದರೆಯಾಗುವುದರೊಂದಿಗೆ ಕಾನೂನು ಸುವ್ಯವಸ್ಥೆಗೆ ಧಕ್ಕೆಯುಂಟಾಗುವ ಸಾಧ್ಯತೆಗಳಿರುತ್ತವೆ.

ಈ ಹಿನ್ನೆಲೆಯಲ್ಲಿ, ಪೊಲೀಸ್ ಅಧೀಕ್ಷಕರ ಶಿಫಾರಸಿನಂತೆ ಮುಂಜಾಗ್ರತಾ ಕ್ರಮವಾಗಿ ಕರ್ನಾಟಕ ಪೊಲೀಸ್ ಕಾಯ್ದೆ-1963 ರ ಕಲಂ 35, 36ರ ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಚಲಾಯಿಸಿ, ಜಿಲ್ಲಾದ್ಯಂತ ಸೆ. 14 ರಿಂದ ಅ.13ರವರೆಗೆ ಈ ನಿಷೇಧಾಜ್ಞೆ ಜಾರಿಯಲ್ಲಿರಲಿದೆ ಎಂದು ಅವರು ತಿಳಿಸಿದ್ದಾರೆ.

ಭದ್ರಾ ಕಾಡಾ ಕಚೇರಿಯಲ್ಲಿ ನೀರು ಬಳಕೆದಾರರ ಸಹಕಾರ ಸಂಘಗಳ ಆಡಳಿತಾಧಿಕಾರಿಗಳು -ಪದಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ



(ಹೊಸನಾವಿಕ)

ಶಿವಮೊಗ್ಗ, ಸೆ.10: ಭದ್ರಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ (ಕಾಡಾ) ಕೇಂದ್ರ ಕಚೇರಿಯಲ್ಲಿ ಸೆ.9ರಂದು ನೀರು ಬಳಕೆದಾರರ ಸಹಕಾರ ಸಂಘಗಳ ಆಡಳಿತಾಧಿಕಾರಿಗಳು, ಪದಾಧಿಕಾರಿಗಳು ಹಾಗೂ ಸದಸ್ಯರುಗಳಿಗಾಗಿ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಾಗಾರದಲ್ಲಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಹಾಗೂ ಭೂ ಅಭಿವೃದ್ಧಿ ಅಧಿಕಾರಿ (ಸಹಕಾರ) ಡಾ. ನಾಗೇಶ್ ಎಸ್. ಡೋಂಗರೆ ಅವರು ನೀರು ಬಳಕೆದಾರ ಸಹಕಾರ ಸಂಘಗಳ ಆಡಳಿತಾಧಿಕಾರಿಗಳಿಗೆ ಅವರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಸಮಗ್ರ ತರಬೇತಿ ನೀಡಿದರು.

ನಂತರ ಕಾಡಾ ಅಧ್ಯಕ್ಷ ಕೆ.ಪಿ. ಅಂಶುಮಂತ್ ಅವರ ಅಧ್ಯಕ್ಷತೆಯಲ್ಲಿ ದಾವಣಗೆರೆ, ಚನ್ನಗಿರಿ ಹಾಗೂ ಹರಿಹರ ತಾಲೂಕುಗಳ ನೀರು ಬಳಕೆದಾರರ ಸಹಕಾರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ಸದಸ್ಯರುಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷರು, ನೀರಾವರಿ ಕ್ಷೇತ್ರದಲ್ಲಿ ನೀರು ಬಳಕೆದಾರರ ಸಹಕಾರ ಸಂಘಗಳ ಜವಾಬ್ದಾರಿ ಹಿರಿದಾದುದು. ರೈತರು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳುವ ಜೊತೆಗೆ ನೀರನ್ನು ಮಿತವಾಗಿ ಬಳಸುವುದನ್ನು ರೂಢಿಸಿಕೊಳ್ಳಬೇಕು. ಸಹಕಾರ ಸಂಘಗಳನ್ನು ವಿವಿಧೋದ್ದೇಶ ಸಂಘಗಳನ್ನಾಗಿ ಪರಿವರ್ತಿಸಿ, ಅವುಗಳಿಂದ ದೊರೆಯುವ ಸೌಲಭ್ಯಗಳನ್ನು ಗರಿಷ್ಠ ಮಟ್ಟದಲ್ಲಿ ಪಡೆದುಕೊಳ್ಳಬೇಕು ಹಾಗೂ ರೈತರೆಲ್ಲರೂ ಒಗ್ಗಟ್ಟಿನಿಂದ ಬೆಳೆ ಬೆಳೆಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಅರ್ಹ ನೀರು ಬಳಕೆದಾರ ಸಹಕಾರ ಸಂಘಗಳಿಗೆ ಕಾಡಾ ಪ್ರಾಧಿಕಾರದ ವತಿಯಿಂದ ಕೃಷಿ ಯಂತ್ರೋಪಕರಣಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಾಡಾ ಆಡಳಿತಾಧಿಕಾರಿಗಳು ಹಾಗೂ ಮುಖ್ಯ ಇಂಜಿನಿಯರ್ ಆರ್. ಸತೀಶ್, ಭೂ ಅಭಿವೃದ್ಧಿ ಅಧಿಕಾರಿ (ತಾಂತ್ರಿಕ) ಪ್ರಶಾಂತ್ ಕೆ., ಉಪ ಆಡಳಿತಾಧಿಕಾರಿ (ಪ್ರ) ಶ್ರೀನಿವಾಸ್ ಚಿಂತಾಲ, ಭೂ ಅಭಿವೃದ್ಧಿ ಅಧಿಕಾರಿ (ಕೃಷಿ), ಭದ್ರಾ ಕಾಡಾ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಹಾಗೂ ದಾವಣಗೆರೆ ವಿಭಾಗದ ನೀರಾವರಿ ನಿಗಮದ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

ಸಸ್ಯಹಾರಿ ಹೊಟೇಲ್‌ನಲ್ಲಿ ಕೆಲಸಕ್ಕೆ ಬೇಕಾಗಿದ್ದಾರೆ

ಶಿವಮೊಗ್ಗ ನಗರದ ಪ್ರತಿಷ್ಠಿತ ಸಸ್ಯಹಾರಿ ಹೊಟೇಲ್‌ನಲ್ಲಿ ಕೆಲಸ ಮಾಡಲು ಹೊಟೆಲ್‌ನಲ್ಲಿ ಕೆಲಸ ಮಾಡಿದ ಅನುಭವವಿರುವ ಅಭ್ಯರ್ಥಿಗಳು ಬೇಕಾಗಿದ್ದಾರೆ.

ಅಡುಗೆ ಭಟ್ಟರು - 03
ಸಹಾಯಕರು - 03
ಕ್ಲೀನರ್ಸ್ - 02
ವೇಯ್ಟರ್ಸ್ - 02
ಕಾಫಿ ಮೇಕರ್ಸ್ - 01

ಆಸಕ್ತ ಅಭ್ಯರ್ಥಿಗಳು ನೇರವಾಗಿ ಈ ಕೆಳಗಿನ ಮೊಬೈಲ್ ನಂಬರ್‌ಗೆ ಸಂಪರ್ಕಿಸಿ:
997 286 8347

ಅಂಬೇಡ್ಕರ್ ವಿಚಾರಧಾರೆ ಅರಿಯಲು ವಿದ್ಯಾರ್ಥಿಗಳಿಗೆ ಕರೆ



(ಹೊಸನಾವಿಕ)

ಶಿವಮೊಗ್ಗ ಸೆ. 10: ಭದ್ರಾವತಿ ತಾಲ್ಲೂಕಿನ ಅಂತರಗಂಗೆ ಕರ್ನಾಟಕ ಪಬ್ಲಿಕ್ ಸ್ಕೂಲ್‌ನ ಪದವಿ ಪೂರ್ವ ವಿಭಾಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಓದು ವಿಶೇಷ ಕಾರ್ಯಕ್ರಮವನ್ನು ಶಾಲಾ ಆವರಣದಲ್ಲಿ ಆಯೋಜಿಸಲಾಗಿತ್ತು.

ಕಾಲೇಜಿನ ಸಿಬಿಸಿ ಅಧ್ಯಕ್ಷ ಗಂಗಾಧರ್ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಪ್ರಾಚಾರ್ಯ ಡಾ. ಸಾಸ್ವೇಹಳ್ಳಿ ಸತೀಶ್ ಅವರು ಅಂಬೇಡ್ಕರ್ ಅವರ ಜೀವನ, ವಿಚಾರಧಾರೆ ಹಾಗೂ ಸಾಮಾಜಿಕ ಚಿಂತನೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ್ ಹೆಚ್. ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು. ಉಪ ಪ್ರಾಚಾರ್ಯ ಸತೀಶ್ ಎಂ. ಹಾಗೂ ಸಿಬಿಸಿ ಸದಸ್ಯ ರಾಮಾಚಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ತಮಟೆ ಜಗದೀಶ್ ಮತ್ತು ತಂಡದ ವಿದ್ಯಾರ್ಥಿಗಳು ಕ್ರಾಂತಿ ಗೀತೆಗಳನ್ನು ಪ್ರಸ್ತುತಪಡಿಸಿದರು. ನಾಡಗೀತೆ ಹಾಗೂ ಸಂವಿಧಾನದ ಪೀಠಿಕೆಯ ವಾಚನ ನಡೆಯಿತು. ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಡಾ. ಸುಧಾಕರ ಸಂಪಾದಕತ್ವದ ಸೌಖ್ಯ ಸಂಪದ ಪುಸ್ತಕ ಲೋಕಾರ್ಪಣೆ



ಹೊನ್ನಾಳಿ, ಸೆ.10: ಬೆನಕನಹಳ್ಳಿಯ ಶ್ರೀ ವಿನಾಯಕ ಪ್ರೌಢ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ, ಸಾಹಿತಿ ಮತ್ತು ಅಂಕಣಕಾರ ಡಾ. ಸುಧಾಕರ ಜಿ. ಲಕ್ಕವಳ್ಳಿ ರಚಿತ ಸೌಖ್ಯ ಸಂಪದ ಪುಸ್ತಕವನ್ನು ಶಾಸಕ ಡಿ.ಜಿ. ಶಾಂತನ ಗೌಡರು ಲೋಕಾರ್ಪಣೆಗೊಳಿಸಿದರು.

ಶ್ರೀ ಮದುಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಲಿಂಗೈಕ್ಯ ಶ್ರೀ 1108 ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ 35ನೇ ಶ್ರದ್ಧಾಂಜಲಿ ಸಮಾರಂಭದ ಅಂಗವಾಗಿ ಆಯೋಜಿಸಿದ್ದ ಶಿವಮೊಗ್ಗ ಪ್ರಾದೇಶಿಕ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳ ವೇದಿಕೆಯಲ್ಲಿ ಈ ಕೃತಿ ಬಿಡುಗಡೆ ಕಾರ್ಯಕ್ರಮ ಜರುಗಿತು.

ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ಶಾಸಕ ಡಿ.ಜಿ. ಶಾಂತನಗೌಡರು, ಪರಮಪೂಜ್ಯ ಗುರುಗಳ ಆಶೀರ್ವಾದ ಮತ್ತು ಪ್ರೇರಣೆಯಿಂದ ನಮ್ಮ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರೊಬ್ಬರು ಸಾಹಿತ್ಯ ಕೃಷಿಯಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವುದು ಅತ್ಯಂತ ಸಂತಸದ ವಿಷಯ. ಶಿಕ್ಷಕರ ಲೇಖನಿ ಸಮಾಜಕ್ಕೆ ಆರೋಗ್ಯದ ಅರಿವು ಮೂಡಿಸಲಿ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಜಗದೀಶ್ ಅವರು, ಡಾ. ಸುಧಾಕರ್ ಅವರು ಕೇವಲ ದೈಹಿಕ ಶಿಕ್ಷಕರಲ್ಲ, ವೈಜ್ಞಾನಿಕ ಚಿಂತನೆಯ ಸಾಹಿತಿ. ಅವರು ಇನ್ನಷ್ಟು ಕ್ರೀಡಾ ವಿಜ್ಞಾನ, ಯೋಗ, ಆಹಾರ ಪದ್ಧತಿ ಕುರಿತ ಸಮಾಜೋಪಯೋಗಿ ಕೃತಿಗಳನ್ನು ರಚಿಸಿ ದೈಹಿಕ ಶಿಕ್ಷಣ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಸ್ಥಳೀಯ ಸಲಹಾ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪ್ರಾದೇಶಿಕ ಅಧಿಕಾರಿಗಳು, ಗ್ರಾಮಸ್ಥರು, ಹಿರಿಯರು, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ವಿವಿಧ ಶಾಲೆಗಳಿಂದ ಆಗಮಿಸಿದ್ದ ಶಿಕ್ಷಕ ಮತ್ತು ವಿದ್ಯಾರ್ಥಿ ವೃಂದದವರು ಉಪಸ್ಥಿತರಿದ್ದು ಲೇಖಕರಿಗೆ ಶುಭ ಹಾರೈಸಿದರು.

ಮೈ.ಚ. ಜಯದೇವರ ಸೇವೆ ಸಮಾಜ ಸದಾ ಸ್ಮರಿಸಲಿದೆ: ಯಡಿಯೂರಪ್ಪ

।ಬದುಕು-ನೆನಪು ।ಇತಿಹಾಸದ ಸೆರಗು ಕೃತಿಗಳ ಬಿಡುಗಡೆ



(ಹೊಸನಾವಿಕ)

ಶಿಕಾರಿಪುರ, ಸೆ.10: ಸಮಾಜವೇ ಸರ್ವಸ್ವ ಎಂದು ಅರಿತು, ಬದುಕನ್ನು ಸಮಾಜ ಸೇವೆಗೆ ಸಮರ್ಪಿಸಿಕೊಂಡ ಮೈ.ಚ. ಜಯದೇವ ಅವರು ಆರ್‌ಎಸ್‌ಎಸ್ ಸಂಘಟನೆ ಮೂಲಕ ಉನ್ನತ ಮಟ್ಟಕ್ಕೆ ಬೆಳೆದು, ಸಮಾಜದ ಎಲ್ಲರಿಗೂ ಆದರ್ಶ ಪ್ರಾಯರಾಗಿದ್ದಾರೆ. ಅವರ ಸೇವೆಯನ್ನು ಸಮಾಜ ಸದಾಕಾಲ ಸ್ಮರಿಸಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ಪಟ್ಟಣದ ಮಂಗಳ ಭವನದಲ್ಲಿ ರಾಷ್ಟ್ರೋತ್ಥಾನ ಪರಿಷತ್, ಬೆಂಗಳೂರು ಹಾಗೂ ಶಿಕಾರಿಪುರ ಘಟಕದ ವತಿಯಿಂದ ಆಯೋಜಿಸಿದ್ದ ಆರ್‌ಎಸ್‌ಎಸ್ ಜೇಷ್ಠ ಪ್ರಚಾರಕ ಹಾಗೂ ರಾಷ್ಟ್ರೋತ್ಥಾನ ಪರಿಷತ್ತಿನ ರೂವಾರಿಗಳಾದ ಮೈ.ಚ. ಜಯದೇವ ಅವರ ಅವಿಶ್ರಾಂತ ಧ್ಯೇಯಜೀವಿ ಮೈ.ಚ. ಜಯದೇವ: ಬದುಕು-ನೆನಪು ಹಾಗೂ ಎಸ್.ಆರ್. ರಾಮಸ್ವಾಮಿ ಅವರ ಇತಿಹಾಸದ ಸೆರಗು: ಪರಾಮರ್ಶ ಪ್ರಬಂಧಗಳು ಕೃತಿಗಳ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಾಧಕರ ಬದುಕು ಮತ್ತು ಸಾರ್ಥಕ ಇತಿಹಾಸ ನಮಗೆ ದಾರಿ ತೋರುವ ಗುರುಗಳಿದ್ದಂತೆ. ಮೈ.ಚ. ಜಯದೇವ ಅವರೊಂದಿಗೆ ಸುಮಾರು ಹತ್ತು ವರ್ಷಗಳ ಕಾಲ ಸಂಘಟನೆಗಾಗಿ ಕಾರ್ಯನಿರ್ವಹಿಸುವ ಅವಕಾಶ ದೊರೆತಿದ್ದು ನನ್ನ ಪೂರ್ವಜನ್ಮದ ಪುಣ್ಯ. ಅವರು ನನಗೂ ಸೇರಿದಂತೆ ಸಮಾಜದ ಅನೇಕರಿಗೆ ಮಾರ್ಗದರ್ಶನ ನೀಡಿದ್ದಾರೆ. ಅವರ ಬದುಕು ಎಲ್ಲರಿಗೂ ಆದರ್ಶಪ್ರಾಯವಾಗಿದೆ. ಎರಡೂ ಕೃತಿಗಳನ್ನು ಖರೀದಿಸಿ ಓದುವಂತೆ ಅವರು ಕರೆ ನೀಡಿದರು.

ಲೇಖಕ ಪ್ರಕಾಶ್ ಮಲ್ಪೆ ಮಾತನಾಡಿ, ಎಸ್.ಆರ್. ರಾಮಸ್ವಾಮಿ ಅವರು ರಾಷ್ಟ್ರೀಯ ಚಿಂತನೆಗೆ ಹೊಸ ತಿರುವು ನೀಡಿದ ವ್ಯಕ್ತಿತ್ವ. ಸಂಘದ ಬೆಳವಣಿಗೆಯಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ. ಅವರ ಜೀವನದ ಘಟನೆಗಳು ಇಂದಿನ ಪೀಳಿಗೆಗೆ ಪ್ರೇರಣೆಯಾಗಬೇಕು. ಇತಿಹಾಸದ ಸೆರಗು ಕೃತಿ ಭಾರತದ ಐಶ್ವರ್ಯ, ಶೌರ್ಯ ಮತ್ತು ರಾಷ್ಟ್ರೀಯತೆಯ ಇತಿಹಾಸವನ್ನು ಪರಿಚಯಿಸುತ್ತದೆ ಎಂದರು.

ಭಾರತೀಯ ಶಿಕ್ಷಣ ಮಂಡಲದ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಜಿ. ಶಂಕರಾನಂದ ಮಾತನಾಡಿ, ಮೈ.ಚ. ಜಯದೇವ ಅವರು ಭಗವದ್ಗೀತೆಯ ತತ್ವದಂತೆ ಬದುಕಿದ ಸಾರ್ಥಕ ಜೀವಿ. ಅಸಾಧ್ಯವೆನಿಸಿದ್ದ ಕಾರ್ಯಗಳನ್ನು ನಗುನಗುತ್ತಲೇ ಸಾಧ್ಯವಾಗಿಸಿದ ಅನೇಕ ಘಟನೆಗಳು ಅವರ ಬದುಕಿನಲ್ಲಿವೆ. ರಾಷ್ಟ್ರೀಯ ಚಿಂತನೆಯ ಪ್ರಸಾರಕ್ಕೆ ಆದ್ಯತೆ ನೀಡಿದ ಅವರು ಅಧಿಕಾರದ ಮೋಹಕ್ಕೆ ಒಳಗಾಗದೆ, ನುಡಿದಂತೆ ನಡೆದು ಇತರರಿಗೆ ಮಾರ್ಗದರ್ಶನ ನೀಡಿದರು ಎಂದು ಹೇಳಿದರು.

ಸಂಸದ ಬಿ.ವೈ. ರಾಘವೇಂದ್ರ, ವಿಭಾಗ ಸಂಘ ಚಾಲಕ ದಿನೇಶ್ ಭಾರತೀಪುರ ಸೇರಿದಂತೆ ಸ್ಥಳೀಯ ಆರ್‌ಎಸ್‌ಎಸ್ ಹಿರಿಯ ಸ್ವಯಂಸೇವಕರು ಉಪಸ್ಥಿತರಿದ್ದರು.

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸರ್ಕಾರಕ್ಕೆ ಶತದಿನಗಳ ಸಂಭ್ರಮ

ಬಣ್ಣದ ಬೆಳಕಿನಲ್ಲಿ ಝುಗಮಗಿಸಲಿವೆ ವಿಧಾನಸೌಧ- ಮೈಸೂರು ಅರಮನೆ ಸೇರಿ ರಾಜ್ಯದ ಪಾರಂಪರಿಕ ಕಟ್ಟಡಗಳು

ಬೆಂಗಳೂರು, ಸೆ.10: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ ಇಂದು ನೂರು ದಿನಗಳ ಸಂಭ್ರಮ. ಈ ಹಿನ್ನೆಲೆಯಲ್ಲಿ ವಿಧಾನಸೌಧ, ಮೈಸೂರು ಅರಮನೆ, ಕೃಷ್ಣರಾಜ ಸಾಗರ ಅಣೆಕಟ್ಟು, ತುಂಗಭದ್ರಾ ಜಲಾಶಯ, ಆಲಮಟ್ಟಿ ಜಲಾಶಯ ಸೇರಿದಂತೆ ರಾಜ್ಯದ ಹನ್ನೊಂದು ಪ್ರಮುಖ ಪಾರಂಪರಿಕ ಕಟ್ಟಡಗಳಿಗೆ ಸೆ.10ರ ಇಂದಿನಿಂದ ನಾಲ್ಕು ದಿನಗಳ ಕಾಲ ವರ್ಣರಂಜಿತ ವಿದ್ಯುತ್ ದೀಪಾಲಂಕಾರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲಾಗುತ್ತಿದೆ.



ಬೆಂಗಳೂರಿನ ಪುರಭವನ, ಕೆ.ಆರ್.ಪುರಂ ತೂಗುಸೇತುವೆ, ಮೈಸೂರು ಅರಮನೆ ಹಾಗೂ ಜಯಮಾರ್ತಾಂಡ ಮಹಾದ್ವಾರ, ಐತಿಹಾಸಿಕ ಹಂಪಿಯ ವಿಶ್ವವಿಖ್ಯಾತ ವಿರೂಪಾಕ್ಷೇಶ್ವರ ದೇವಾಲಯದ ಬಿಷ್ಟಪ್ಪಯ್ಯನ ಗೋಪುರ, ಕಲಬುರ್ಗಿಯ ಜಿಲ್ಲಾಧಿಕಾರಿ ಕಚೇರಿ, ಜಗತ್ ಸರ್ಕಲ್ ಸೇರಿದಂತೆ ಪ್ರಮುಖ ಸ್ಥಳಗಳು ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸಲಿವೆ.

ಸರ್ಕಾರದ ಅಭಿವೃದ್ಧಿ ಯೋಜನೆ ಮತ್ತು ಪಂಚ ಗ್ಯಾರಂಟಿ ಯೋಜನೆಗಳ ಯಶೋಗಾಥೆ ಯನ್ನು ಬಿಂಬಿಸುವ ಮನಮೋಹಕ ಎಲ್‌ಇಡಿ ಪ್ರದರ್ಶನಗಳು, ಧ್ವನಿ ಮತ್ತು ಬೆಳಕು, ತ್ರಿಡಿ ಮ್ಯಾಪಿಂಗ್ ಪ್ರದರ್ಶನಗಳ ಆಯ್ದ ಕಟ್ಟಡಗಳ ಮೇಲೆ ಬಿತ್ತರಗೊಳ್ಳಲಿವೆ.

ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಕ್ಕೇರಿ ನೂರು ದಿನಗಳ ಈ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಸಾರ್ವಜನಿಕರ ಕುಂದು ಕೊರತೆ, ಅಹವಾಲು ಆಲಿಸಿ, ಪರಿಹರಿಸಲು ಪ್ರಜಾಸೇವಾ ಇಲಾಖೆ ಸ್ಥಾಪನೆ, ಗ್ಯಾರಂಟಿ ಯೋಜನೆಗಳಡಿ ಸೋರಿಕೆ ತಡೆಗೆ ಕಟ್ಟುನಿಟ್ಟಿನ ಕ್ರಮ, ರೌಡಿಗಳ ನಿಗ್ರಹಕ್ಕೆ ಜಿಲ್ಲೆಗೊಂದು ಪಡೆ ರಚನೆ, ಕೇಂದ್ರದ ನೀತಿ ಆಯೋಗದ ಸಭೆಯಲ್ಲಿ ಕರ್ನಾಟಕದ ಬೇಡಿಗಳ ಪ್ರಬಲ ಮಂಡನೆ, ನೂತನ ಸಿಎಸ್‌ಆರ್ ನೀತಿ ಕ್ರಮ, ಬರಪರಿಸ್ಥಿತಿ ನಿರ್ವಹಣೆಗೆ ವಿಭಾಗ ವಾರು ಪರಿಶೀಲನೆ ನಡೆಸಿ ಅಗತ್ಯ ಸಿದ್ಧತೆ ಕರಾವಳಿ ಪ್ರವಾಸೋದ್ಯಮ ಉತ್ತೇಜನಕ್ಕೆ ವಿಶೇಷ ಒತ್ತು, ಕೊಪ್ಪಳ, ರಾಯಚೂರು, ವಿಜಯನಗರ, ಬಳ್ಳಾರಿ ಹಾಗೂ ನೆರೆಯ ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳ ರೈತರ ಜೀವನಾಡಿ ಯಾಗಿರುವ ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆ ಹೊಸ ಸ್ಪಿಲ್ ವೇ ಗೇಟುಗಳ ಉದ್ಘಾಟನೆ, ಬಿಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಎರಡು ಮತ್ತು ಮೂರನೇ ಹಂತದ ನಗರಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಒತ್ತು, 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಕ್ರಮ ಸೇರಿದಂತೆ ಅನೇಕ ಕಾರ್ಯದರ್ಶಿಗಳನ್ನು ಅನುಷ್ಠಾನಗೊಳಿಸಿದ್ದಾರೆ. ಮುಖ್ಯಮಂತ್ರಿಗಳು ಮುಂಬರುವ ದಿನಗಳಲ್ಲಿ ದೃಢ ಕರ್ನಾಟಕದ ಸಂಕಲ್ಪಕ್ಕೆ ಮಹತ್ವದ ಹೆಜ್ಜೆಗಳನ್ನು ಇಡಲು ಆಲೋಚಿಸಿದ್ದಾರೆ ಎಂದು ವಾರ್ತಾ ಇಲಾಖೆಯ ಆಯುಕ್ತರಾದ ಎಂ.ಎನ್. ಅನುಚೇತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.11ರ ನಾಳೆ ಶಿವಮೊಗ್ಗದಲ್ಲಿ ಶಾಲಾ ಕಾಲೇಜುಗಳಿಗೆ ಉಚಿತ ಪುಸ್ತಕ ವಿತರಣೆ – ಉಪನ್ಯಾಸ ಕಾರ್ಯಕ್ರಮ

(ಹೊಸನಾವಿಕ)

ಶಿವಮೊಗ್ಗ ಸೆ.10: ಕನ್ನಡ ಪುಸ್ತಕ ಪ್ರಾಧಿಕಾರವು ಶಿವಮೊಗ್ಗ ಜಿಲ್ಲೆಯಲ್ಲಿ ಶಾಲಾ ಕಾಲೇಜುಗಳಿಗೆ ಉಚಿತ ಪುಸ್ತಕ ವಿತರಣಾ ಸಮಾರಂಭವನ್ನು ಹಮ್ಮಿಕೊಂಡಿದೆ. ಇದರೊಂದಿಗೆ ಕನ್ನಡ ಪುಸ್ತಕಗಳ ಡಿಜಿಟಲ್ ಜಗತ್ತು ಹಾಗೂ ನಾವು ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಹಿರಿಯ ಸಾಹಿತಿಗಳಾದ ಪ್ರೊ. ಶ್ರೀಕಂಠ ಕೂಡಿಗೆ ಅವರು ಈ ಕಾರ್ಯಕ್ರಮ ಉದ್ಘಾಟಿಸಿ, ಶಾಲಾ ಕಾಲೇಜುಗಳಿಗೆ ಪುಸ್ತಕಗಳನ್ನು ವಿತರಣೆ ಮಾಡಲಿದ್ದಾರೆ. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಅವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಡಿಜಿಟಲ್ ಆರ್ಕೈವಿಸ್ಟ್, ಸಂಚಿ ಫೌಂಡೇಷನ್ನ ಓಂಶಿವಪ್ರಕಾಶ್ ಅವರು ಕನ್ನಡ ಪುಸ್ತಕಗಳ ಡಿಜಿಟಲ್ ಜಗತ್ತು ಹಾಗೂ ನಾವು ಎಂಬ ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ.

ಶಿವಮೊಗ್ಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಿ. ಮಂಜುನಾಥ್, ಶಿವಮೊಗ್ಗ ದೇಶೀಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ರಿಜಿಸ್ಟ್ರಾರ್ ಪ್ರೊ. ಎಂ. ವೆಂಕಟೇಶ್ ಹಾಗೂ ಪ್ರಾಂಶುಪಾಲ ಪ್ರೊ. ಎನ್. ಕುಮಾರಸ್ವಾಮಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯರಾದ ಅಕ್ಷತಾ ಹುಂಚದಕಟ್ಟೆ ಅವರುಗಳು ಉಪಸ್ಥಿತರಿರುತ್ತಾರೆ.

ಸೆ.11ರಂದು ಮಧ್ಯಾಹ್ನ 2.30 ಗಂಟೆಗೆ ಶಿವಮೊಗ್ಗದ ಡಿವಿಎಸ್ ಕಲಾ, ವಿಜ್ಞಾನ ವಾಣಿಜ್ಯ ಕಾಲೇಜು ಸಿಂಗಾರ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ.

ಕಾಯಕತತ್ವ ಮತ್ತು ದಾಸೋಹ ಸೇವೆಯ ಎರಡು ಚಕ್ರಗಳು

ಕಾಯಕದಲ್ಲಿ ಶಿವಭಾವ, ದಾಸೋಹವೇ ಜೀವಾಳ: ಸ್ವಾಮೀಜಿ



(ಹೊಸನಾವಿಕ)

ಶಿವಮೊಗ್ಗ ಸೆ.10: ಕಾಯಕತತ್ವ ಮತ್ತು ದಾಸೋಹ ಸಮಾಜ ಸೇವೆಯ ಪ್ರಮುಖ ಅಂಗಗಳಾಗಿದ್ದು, ಕಾಯಕದಲ್ಲಿ ಶಿವಪೂಜೆಯ ಭಾವವಿದ್ದರೆ ದಾಸೋಹವೇ ಅದಕ್ಕೆ ಜೀವಾಳ ಎಂದು ಶ್ರೀ ಮಹಾಸಂಸ್ಥಾನ ಮಠ ಹಾಗೂ ಶ್ರೀ ಗುರುಬಸವ ಅಧ್ಯಯನ ಪೀಠದ ಅಧ್ಯಕ್ಷರಾದ ಪೂಜ್ಯ ಶ್ರೀ ಶ್ರೀ ಶ್ರೀ ಮಲ್ಲಿಕಾರ್ಜುನ ಮುರುಘ ರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ಬೊಮ್ಮನಕಟ್ಟೆಯ ಶ್ರೀ ಅನ್ನಪೂರ್ಣೇಶ್ವರಿ ದೇವಸ್ಥಾನದ ಆವರಣದಲ್ಲಿ ಬುಧವಾರ ನಡೆದ ಶ್ರಾವಣ ಚಿಂತನೆ-2026ರ ಸಮಾರೋಪ ಸಮಾರಂಭದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಶರಣರ ಕಾಯಕ-ದಾಸೋಹ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಸೇವಾ ಮನೋಭಾವವನ್ನು ಮತ್ತಷ್ಟು ಬಲಪಡಿಸಬೇಕೆಂದು ಕರೆ ನೀಡಿದರು.

ಕಾಯಕವೆಂದರೆ ಕೇವಲ ಜೀವನೋಪಾಯಕ್ಕಾಗಿ ಮಾಡುವ ಕೆಲಸವಲ್ಲ, ಪ್ರಾಮಾಣಿಕತೆ, ಶ್ರದ್ಧೆ ಮತ್ತು ಶಿವಭಾವನೆಯಿಂದ ಮಾಡುವ ದುಡಿಮೆಯೇ ನಿಜವಾದ ಕಾಯಕ. ತಾನು ದುಡಿದು ಗಳಿಸಿದುದರಲ್ಲಿ ಸಮಾಜದ ಒಳಿತಿಗಾಗಿ ಹಂಚಿಕೊಳ್ಳುವ ಮನೋಭಾವವೇ ದಾಸೋಹದ ಮೂಲತತ್ವ. ಕಾಯಕ ಮತ್ತು ದಾಸೋಹ ಒಂದಕ್ಕೊಂದು ಪೂರಕವಾಗಿದ್ದು, ಸಮಾಜವನ್ನು ಮುನ್ನಡೆಸುವ ಸೇವೆಯ ಎರಡು ಚಕ್ರಗಳಿದ್ದಂತೆ ಎಂದು ಶ್ರೀಗಳು ತಿಳಿಸಿದರು.

ಬಸವಾದಿ ಶರಣರು ಸಾರಿದ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯತೆಯ ಸಂದೇಶ ಇಂದಿಗೂ ಪ್ರಸ್ತುತವಾಗಿದೆ. ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಸೇವಾ ಮನೋಭಾವ ಬೆಳೆಸಿಕೊಂಡಾಗ ಮಾತ್ರ ಆರೋಗ್ಯಕರ ಹಾಗೂ ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ಅವರು ಹೇಳಿದರು.

ಭಾರತದ ಅಸ್ಮಿತೆ ಮತ್ತು ವಿಶ್ವಮಾನವತೆ ಕುರಿತು ಕರ್ನಾಟಕ ದಕ್ಷಿಣ ಪ್ರಾಂತ ಸಹ ಸಂಪರ್ಕ ಪ್ರಮುಖರಾದ ಯಾದವ ಕೃಷ್ಣ ವಿಶೇಷ ಉಪನ್ಯಾಸ ನೀಡಿದರು. ಭಾರತೀಯ ಕುಟುಂಬ ವ್ಯವಸ್ಥೆಯ ವೈಶಿಷ್ಟ್ಯ, ವಸುಧೈವ ಕುಟುಂಬಕಂ ಪರಿಕಲ್ಪನೆ ಹಾಗೂ ಭಾರತೀಯ ಸಂಸ್ಕೃತಿಯಲ್ಲಿನ ವಿಶ್ವಮಾನವತೆಯ ಮೌಲ್ಯಗಳನ್ನು ವಿವರಿಸಿದ ಅವರು, ನಿರ್ವ್ಯಾಜ ಪ್ರೀತಿ, ಸಹಬಾಳ್ವೆ, ಸೇವೆ ಮತ್ತು ಮಾನವೀಯತೆಯನ್ನು ಬೆಳೆಸಿಕೊಳ್ಳುವ ಅಗತ್ಯವನ್ನು ಒತ್ತಿ ಹೇಳಿದರು.

ಕೈಗಾರಿಕೋದ್ಯಮಿ ಎ. ರುದ್ರೇಗೌಡ ಸಮಾರಂಭ ಉದ್ಘಾಟಿಸಿದರು. ಶರಣ ಡಿ.ಜಿ. ಬೆನಕಪ್ಪ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜಿ.ಕೆ. ಮಾಧವಮೂರ್ತಿ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು. ಶಶಿಧರ್, ವಿಶ್ವಾಸ್, ವಿವಿಧ ಕ್ಷೇತ್ರಗಳ ಗಣ್ಯರು, ಸೇವಾಕರ್ತರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಶ್ರಾವಣ ಮಾಸದ ಆಧ್ಯಾತ್ಮಿಕ ಚಿಂತನೆ, ಶರಣರ ವಿಚಾರಧಾರೆ ಮತ್ತು ಸಮಾಜಮುಖಿ ಸೇವೆಯ ಆಶಯಗಳನ್ನು ಜನಮಾನಸಕ್ಕೆ ತಲುಪಿಸುವ ಉದ್ದೇಶದಿಂದ ಆಯೋಜಿಸಿದ್ದ ಕಾರ್ಯಕ್ರಮವು ಭಕ್ತಿ ಮತ್ತು ಚಿಂತನೆಯ ಸಂಗಮವಾಗಿ ಮೂಡಿಬಂತು. ಹರ್ಷ ಭಾಸ್ಕರ್ ಕಾಮತ್ ಹಾಗೂ ಕುಟುಂಬದವರು ಸೇವಾ ಸಂಘಟನೆಯಲ್ಲಿ ಪ್ರಮುಖವಾಗಿ ತೊಡಗಿಸಿಕೊಂಡಿದ್ದರು. ಸಮಾರಂಭದ ಬಳಿಕ ಭಕ್ತರು ಹಾಗೂ ಸಾರ್ವಜನಿಕರಿಗೆ ದಾಸೋಹ ಏರ್ಪಡಿಸಲಾಗಿತ್ತು.

ಶಿವ ಸಂಕಲ್ಪ ಒಕ್ಕೂಟದ ವಾರ್ಷಿಕೋತ್ಸವ: ಹಿರಿಯ ದಂಪತಿಗಳಿಗೆ ಸನ್ಮಾನ

(ಮೊದಲ ಪುಟದಿಂದ)

ಪುರಸ್ಕಾರ ನೀಡಲಾಗುವುದು ಎಂದರು.

ಉತ್ತರಾಖಂಡದ ಕೇದಾರ ಪೀಠದ ಜಗದ್ಗುರು ರಾವಳ್ ಪದವಿ ಭೂಷಿತ ಶ್ರೀ 1008 ಭೀಮಾ ಶಂಕರಲಿಂಗ ಶಿವಾಚಾರ್ಯ ಭಗವತ್ಪಾದರು ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ. ಹೊನ್ನಾಳಿ ಹಿರೇಕಲ್ಮಠದ ಶ್ರೀ ಡಾ. ಚನ್ನಮಲ್ಲಿಕಾರ್ಜುನ ಮಹಾಸ್ವಾಮಿಗಳು, ಕಣ್ಣುಕುಪ್ಪೆ ಗವಿಮಠದ ಶ್ರೀ ಶಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಬಿಳಕಿ ಹಿರೇಮಠದ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಉಪಸ್ಥಿತರಿರುವರು.

ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ಬಿ.ಜಿ. ಜಗದೀಶ್, ಕೆ.ಎಸ್. ತಾರಾನಾಥ್, ಕೆ.ಇ. ಕಾಂತೇಶ್, ಪಿ. ರುದ್ರೇಶ್, ಎಂ.ಜಿ. ವಿರೂಪಾಕ್ಷಯ್ಯ ಶಾಸ್ತ್ರಿ ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಶಿವಮೊಗ್ಗ ನಗರದ ಅರ್ಹ ಹಿರಿಯ ದಂಪತಿಗಳು ಹಾಗೂ ವಿದ್ಯಾರ್ಥಿಗಳು ಆಧಾರ್ ಕಾರ್ಡ್ ಪ್ರತಿಯೊಂದಿಗೆ ಹೆಸರು ನೋಂದಾಯಿಸಿಕೊಳ್ಳುವಂತೆ ಕೋರಲಾಗಿದೆ. ಹಿರಿಯ ದಂಪತಿಗಳು ಶಕುಂತಲಾ ಜಗದೀಶ್ (9901768196), ಪ್ರತಿಭಾ ಪುರಸ್ಕಾರಕ್ಕೆ ಕುಬೇರಪ್ಪ ಪಿ.ಹೆಚ್. (9242415856) ಅವರನ್ನು ಸಂಪರ್ಕಿಸಬಹುದು.

ಅಂದು ಬೆಳಿಗ್ಗೆ 8 ಗಂಟೆಗೆ ವಿಜಯನಗರದ ದ್ರೌಪದಮ್ಮ ವೃತ್ತದ ಬಳಿಯ ಮಹಾಲಿಂಗಯ್ಯ ಶಾಸ್ತ್ರಿ ಅವರ ನಿವಾಸದಲ್ಲಿ ಶ್ರೀಗಳ ಸಾನ್ನಿಧ್ಯದಲ್ಲಿ ಸಂಗೀತಯುಕ್ತ ಇಷ್ಟಲಿಂಗ ಪೂಜೆ ನಡೆಯಲಿದೆ ಎಂದು ಒಕ್ಕೂಟದ ಅಧ್ಯಕ್ಷ ಇ. ವಿಶ್ವಾಸ್ ತಿಳಿಸಿದರು.

ಪ್ರಮುಖರಾದ ಸೋಮಶೇಖರ್, ಬಿ.ಎಸ್. ಲಿಂಗಮೂರ್ತಿ, ಕುಬೇರಪ್ಪ ಶಕುಂತಲಾ ಜಗದೀಶ್, ಸವಿತಾ ಪಾಲಾಕ್ಷಪ್ಪ, ವಿನುತ ಅರವಿಂದ್, ಜಯಂತಿ ವಾಲಿ, ವಿರೂಪಾಕ್ಷಯ್ಯ ಶಾಸ್ತ್ರಿ ಸ್ವಾಮಿ. ಆರ್.ಎಸ್, ರಾಜಯ್ಯ ಇನ್ನಿತರರುಇದ್ದರು.

ಶಿವಮೊಗ್ಗದ ಹೋಟೇಲ್‌ನಲ್ಲಿ ಕೆಲಸಕ್ಕೆ ಬೇಕಾಗಿದ್ದಾರೆ

ನಗರದ ಪ್ರತಿಷ್ಠಿತ ಸಸ್ಯಹಾರಿ ಹೋಟೇಲ್‌ನಲ್ಲಿ ಕೆಲಸ ಮಾಡಲು ಅನುಭವವಿರುವ ಅಭ್ಯರ್ಥಿಗಳು ಬೇಕಾಗಿದ್ದಾರೆ.

ಅಡುಗೆ ಭಟ್ಟರು - 03
ಸಹಾಯಕರು - 03
ಕ್ಲೀನರ್ಸ್ - 02
ವೇಯ್ಟರ್ಸ್ - 02
ಕಾಫಿ ಮೇಕರ್ಸ್ - 01

ಆಸಕ್ತ ಅಭ್ಯರ್ಥಿಗಳು ನೇರವಾಗಿ ಈ ಕೆಳಗಿನ ಮೊಬೈಲ್ ನಂಬರ್‌ಗೆ ಸಂಪರ್ಕಿಸಿ:

997 286 8347

18 ವರ್ಷ ಪೂರೈಸುವ ಯುವಜನತೆಗೆ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಅವಕಾಶ :ಸುಜಾತ



ಶಿವಮೊಗ್ಗ, ಸೆ.10: ದಿನಾಂಕ 01-10-2026ರ ವೇಳೆಗೆ 18 ವರ್ಷ ವಯಸ್ಸು ಪೂರೈಸುವ ಎಲ್ಲಾ ಅರ್ಹ ಯುವಕ-ಯುವತಿಯರು ಮತದಾರರ ಪಟ್ಟಿಯಲ್ಲಿ ಕಡ್ಡಾಯವಾಗಿ ಹೆಸರು ಸೇರ್ಪಡೆಗೊಳಿಸಲು ಸುವರ್ಣಾವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸುಜಾತ ತಿಳಿಸಿದರು.

ಜಿಲ್ಲಾಡಳಿತ, ಜಿಪಂ ಸ್ವೀಪ್ ಸಮಿತಿ ಹಾಗೂ ಮಹಾನಗರ ಪಾಲಿಕೆ ವತಿಯಿಂದ ಜಿಲ್ಲಾ ಪಂಚಾಯತ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಮತ್ತು ಮತದಾರರ ಸಾಕ್ಷರತಾ ಸಂಘಗಳ ಸಂಚಾಲಕರ ಸಭೆಯಲ್ಲಿ ಅವರು ಮಾತನಾಡಿದರು.

ತಮ್ಮ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ನಿಗದಿತ ಅರ್ಹತಾ ದಿನಾಂಕದ ವೇಳೆಗೆ 18 ವರ್ಷ ಭರ್ತಿಯಾಗುವ ಎಲ್ಲಾ ವಿದ್ಯಾರ್ಥಿ- ವಿದ್ಯಾರ್ಥಿನಿಯರನ್ನು ಮತದಾರರ ಪಟ್ಟಿಗೆ ನೋಂದಾಯಿಸಲು ಸಂಬಂಧಪಟ್ಟ ಸಂಸ್ಥೆಗಳ ಮುಖ್ಯಸ್ಥರು ಅಗತ್ಯ ಕ್ರಮ ವಹಿಸಬೇಕು ಎಂದು ಈ ಸಂದರ್ಭದಲ್ಲಿ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ಹೊಸದಾಗಿ ಮತದಾರರ ಹೆಸರು ನೊಂದಣಿಗಾಗಿ 'ಫಾರ್ಮ್-6' ಅನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ಸರಳವಾಗಿ ಭರ್ತಿ ಮಾಡುವ ವಿಧಾನಗಳ ಬಗ್ಗೆ ವಿವರವಾದ ಮಾಹಿತಿ ನೀಡಲಾಯಿತು.

ಈ ಸಭೆಯಲ್ಲಿ ರಾಜ್ಯಮಟ್ಟದ ಸ್ವೀಪ್ ತರಬೇತಿದಾರರಾದ ನವೀದ್ ಅಹಮದ್ ಪರ್ವೀಜ್, ಡಾ. ಕಿರಣ್ ಸೇರಿದಂತೆ ಅಧಿಕಾರಿಗಳು ಹಾಗೂ ವಿವಿಧ ಕಾಲೇಜುಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಕೈಗಾರಿಕಾ ಅಭಿವೃದ್ಧಿಗೆ ಶಿವಮೊಗ್ಗ ಸೇರ್ಪಡೆ

(ಮೊದಲ ಪುಟದಿಂದ)

ವಿಶ್ವದರ್ಜೆಯ ಮೂಲ ಸೌಕರ್ಯ ಬೆಂಗಳೂರಿಗೆ ಮಾತ್ರ ಸೀಮಿತವಾಗದೆ, ಶಿವಮೊಗ್ಗದಂತಹ ನಗರಗಳಿಗೂ ವಿಸ್ತರಿಸಬೇಕು ಎಂದರು.

ಅಡಿಕೆ ಪ್ರಧಾನ ಜಿಲ್ಲೆಯಾಗಿರುವ ಶಿವಮೊಗ್ಗದಲ್ಲಿ ಕೃಷಿ ಆಧಾರಿತ ಆರ್ಥಿಕತೆಯನ್ನು ಕೈಗಾರಿಕಾ ಆಧಾರಿತ ಬೆಳವಣಿಗೆಯತ್ತ ಕೊಂಡೊಯ್ಯಬೇಕು. ದೇಶೀಯ ಹಾಗೂ ಜಾಗತಿಕ ಹೂಡಿಕೆದಾರರನ್ನು ಆಕರ್ಷಿಸುವ ಉದಯೋನ್ಮುಖ ಕೈಗಾರಿಕಾ ಕ್ಲಸ್ಟರ್ ಆಗಿ ಶಿವಮೊಗ್ಗವನ್ನು ರೂಪಿಸಬೇಕಿದೆ ಎಂದು ಹೇಳಿದರು.

ಸಂಘದ ಅಧ್ಯಕ್ಷ ಬಿ. ಗೋಪಿನಾಥ್, ಪ್ರಮುಖರಾದ ಜಿ. ವಿಜಯಕುಮಾರ್, ಎ.ಎಂ. ಸುರೇಶ್, ಕೆ.ಎಸ್. ಸುಕುಮಾರ್, ಆರ್. ಮನೋಹರ್, ಡಾ. ಲಕ್ಷ್ಮೀದೇವಿ ಗೋಪಿನಾಥ್, ಎ.ಎಲ್. ಚಂದ್ರಶೇಖರ್, ಮಧುಕರ್ ಶೆಟ್ಟಿ, ನಾಗೇಶ್, ದೇವರಾಜ್, ಚಂದ್ರಶೇಖರ್, ಪ್ರಭಾಕರ್ ಉಪಸ್ಥಿತರಿದ್ದರು.

ಉದ್ಯೋಗ ಪಡೆಯಲು ಕಠಿಣ ಪರಿಶ್ರಮ ಅಗತ್ಯ

(ಮೊದಲ ಪುಟದಿಂದ)

ಎಸ್‌ಡಿಎ, ಪಿಡಿಒ, ಪಿಎಸ್‌ಐ, ಲ್ಯಾಂಡ್ ಸರ್ವೇಯರ್, ಎನ್‌ಇಟಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಎರಡು ತಿಂಗಳ ಉಚಿತ ತರಬೇತಿ ನೀಡಲಾಗುತ್ತಿದೆ. ಸೆ.19 ರಂದು ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಸುಮಾರು ಮೂರು ಸಾವಿರ ಮಂದಿಗೆ ಉದ್ಯೋಗ ಕಲ್ಪಿಸುವ ಗುರಿ ಹೊಂದಲಾಗಿದೆ. ಸೆ.26ರಿಂದ ಬಿಎಡ್ ವಿದ್ಯಾರ್ಥಿಗಳಿಗಾಗಿ 15 ದಿನಗಳ ಉಚಿತ ತರಬೇತಿಯನ್ನೂ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಭಿಷೇಕ್ ಸೇರಿದಂತೆ ರಂಗನಾಥ್ ಕೆ., ಜಿ.ಡಿ. ಮಂಜುನಾಥ್, ವಿನೋದ್ ಕೆ., ಪ್ರವೀಣ್ ಕುಮಾರ್, ರಾಜಶೇಖರ್, ಅಲ್ತಾಫ್ ಫರ್ವಿಜ್, ಕೇಶವ, ಹೆಚ್.ಪಿ. ಗಿರೀಶ್, ಕುಬೇಂದ್ರಪ್ಪ ಹಾಗೂ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ

(ಹೊಸನಾವಿಕ)

ಶಿವಮೊಗ್ಗ, ಸೆ.10: ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಪರಿಶಿಷ್ಟ ವರ್ಗ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಶ್ರೀ ಮಹರ್ಷಿ ವಾಲ್ಮೀಕಿರವರ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಅರ್ಜಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ಶ್ರೀ ಮಹರ್ಷಿ ವಾಲ್ಮೀಕಿ ಭವನ, ಕಂಟ್ರಿ ಕ್ಲಬ್ ರಸ್ತೆ, ವಿದ್ಯಾನಗರ, ಶಿವಮೊಗ್ಗ ಇಲ್ಲಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಸೆ. 30 ರೊಳಗಾಗಿ ಪೂರ್ಣ ದಾಖಲಾತಿಗಳೊಂದಿಗೆ ಈ ಕಛೇರಿಗೆ ಸಲ್ಲಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಸ್.ಜಿ. ಶ್ರೀನಿವಾಸ್ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹಾಲಲಕ್ಕವಳ್ಳಿಯಿಂದ ಪಾದಯಾತ್ರೆಗೆ ಚಾಲನೆ



(ಹೊಸನಾವಿಕ)

ಶಿವಮೊಗ್ಗ, ಸೆ.10: ಹಾಲಲಕ್ಕವಳ್ಳಿಯಿಂದ ಆರಂಭವಾದ ಪಾದಯಾತ್ರೆಗೆ ಚಾಲನೆ ನೀಡುವ ಅಂಗವಾಗಿ ನಡೆದ ಉದ್ಘಾಟನಾ ಸಾರ್ವಜನಿಕ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಆರ್.ಕೆ. ಸಿದ್ದರಾಮಣ್ಣ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಪಾದಯಾತ್ರೆಯ ಉಸ್ತುವಾರಿ ಹಾಗೂ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹರಿಕೃಷ್ಣ, ಜಿಲ್ಲಾ ಉಪಾಧ್ಯಕ್ಷೆ ಪದ್ಮಿನಿರಾವ್, ಜಿಲ್ಲಾ ಕಾರ್ಯದರ್ಶಿಗಳಾದ ಶಾಂತ ಸುರೇಂದ್ರ, ತೀರ್ಥಹಳ್ಳಿ ಮಂಡಲದ ಅಧ್ಯಕ್ಷ ನವೀನ್ ಹೆದ್ದೂರ್, ಗಾಜನೂರು ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಕುಮಾರ್, ಹಿರಿಯ ಮುಖಂಡರಾದ ಶಿವನಂಜಪ್ಪ, ಜಿಲ್ಲಾ ಪ್ರಮುಖರಾದ ಕುಪೇಂದ್ರ ಮತ್ತು ಪೆರುಮಾಳ್, ಹಾಲಲಕ್ಕವಳ್ಳಿಯ ಹಿರಿಯರಾದ ಜಯರಾವ್ ಹಾಗೂ ಸತೀಶ್ ಸೇರಿದಂತೆ ಶಿವಮೊಗ್ಗ ಜಿಲ್ಲಾ ಮತ್ತು ನಗರದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಪ್ರಮುಖರು ಸಭೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಪಾದಯಾತ್ರೆಯ ಉದ್ದೇಶ ಹಾಗೂ ಪಕ್ಷದ ಸಂಘಟನಾ ಚಟುವಟಿಕೆಗಳ ಕುರಿತು ಮುಖಂಡರು ಕಾರ್ಯಕರ್ತರಿಗೆ ಮಾರ್ಗದರ್ಶನ ನೀಡಿದರು.

ಕಾಂಗ್ರೆಸ್ ಜನರನ್ನು ದಾರಿ ತಪ್ಪಿಸುತ್ತಿದೆ

(ಮೊದಲ ಪುಟದಿಂದ)

ಎಂದರು.

ರಾಜ್ಯ ಸರ್ಕಾರ ಕಸ್ತೂರಿ ರಂಗನ್ ವರದಿ ಕುರಿತು ವಿಶೇಷ ಅಧಿವೇಶನ ಕರೆದಿರುವುದನ್ನು ಸ್ವಾಗತಿಸಿದ ಅವರು, ಅಧಿವೇಶನದಲ್ಲಿ ಪಕ್ಷಾತೀತ ನಿರ್ಣಯ ಕೈಗೊಳ್ಳಲು ಬಿಜೆಪಿ ಸಹಕರಿಸಲಿದೆ ಎಂದರು.

ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಆರಗ, ಸರ್ಕಾರದ ಆಡಳಿತದಲ್ಲಿ ಗಮನಾರ್ಹ ಸಾಧನೆ ಕಂಡುಬರುತ್ತಿಲ್ಲ, ಭ್ರಷ್ಟಾಚಾರ ಹಾಗೂ ಲಂಚಗುಳಿತನಕ್ಕೆ ಅವಕಾಶ ನೀಡಲಾಗಿದೆ ಎಂದು ಆರೋಪಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ಬಳ್ಳಾರಿ ಪಾದಯಾತ್ರೆ, ಜನಾಕ್ರೋಶದ ಯಾತ್ರೆಯಾಗಿ ಪರಿವರ್ತನೆಯಾಗಿದೆ. ರಾಜ್ಯದ ಜನರ ಸಮಸ್ಯೆಗಳ ಕುರಿತು ಬಿಜೆಪಿ ನಡೆಸಿದ ಹೋರಾಟಕ್ಕೆ ಉತ್ತಮ ಸ್ಪಂದನೆ ದೊರೆತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಲತೇಶ್, ಗಣೇಶ್ ಉಪಸ್ಥಿತರಿದ್ದರು.

ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಸಹಾಯಧನ ಪಡೆಯಲು ಅರ್ಹರಿಂದ ಅರ್ಜಿ ಆಹ್ವಾನ

(ಹೊಸನಾವಿಕ)

ಶಿವಮೊಗ್ಗ, ಸೆ.10: ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ವತಿಯಿಂದ 2026-27ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ವಿವಿಧ ಯೋಜನೆಗಳಡಿ ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು ಶೈಕ್ಷಣಿಕ ನೇರಸಾಲ ಯೋಜನೆ (ನವೀನ ಮತ್ತು ನವೀಕರಣ), ಗಂಗಾಕಲ್ಯಾಣ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಹೊಲಿಗೆ ಯಂತ್ರ/ ಜಿಗ್ ಜಾಗ್ ಯೋಜನೆಗಳಡಿ ಸೌಲಭ್ಯ ಪಡೆಯಲು ಹಿಂದುಳಿದ ವರ್ಗಗಳಿಗೆ ಸೇರಿದ ಕಾಡುಗೊಲ್ಲ ಸಮಾಜ ಮತ್ತು ಅದರ ಉಪ ಜಾತಿಗಳಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಸವಿತ, ಹಟ್ಟಿಗೊಲ್ಲ, ಮರಾಠ, ಈಡಿಗ, ತಿಗಳ, ಕುಂಬಾರ, ಹಡಪದ, ಗಾಣಿಕ ಮತ್ತು ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ) ಸಮುದಾಯದ ಆಸಕ್ತರು ಆನ್‌ಲೈನ್ ಅರ್ಜಿ ಸಲ್ಲಿಸಬಹುದು.

ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ಆಧಾರ್ ಕಾರ್ಡಿನಲ್ಲಿರುವಂತೆ ಅರ್ಜಿದಾರರ ಹೆಸರು ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇರುವಂತೆ ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸುವಂತಿಲ್ಲ, 2024-25 ಮತ್ತು 2025-26 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಆಸಕ್ತ ಕಾಡುಗೊಲ್ಲ ಜನಾಂಗದ ಅರ್ಜಿದಾರರು ಸೇವಾಸಿಂಧು ಪೋರ್ಟಲ್ https:// sevasindhu.karnataka. gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಸೆ.30 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಫೋ: 080-22374832/8050770004/ 8050770005 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ, ದೇವರಾಜ ಅರಸು ಭವನ, ಬಾಲರಾಜ್ ಅರಸು ರಸ್ತೆ, ಕೆ.ಇ.ಬಿ. ಸರ್ಕಲ್ ಹತ್ತಿರ, ಶಿವಮೊಗ್ಗ, ಕಛೇರಿ ದೂ.ಸಂ. 08182-229634ನ್ನು ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

Office @ :Behind KSRTC Bus stand, Vijaya Rice Mill Building, Budha Nagar, Shimoga 577201. Karnataka State. Phone: 948 248 2182
Edited, Published, Printed & Owned by ALPHONSE RAKESH D'SOUZA. "Rekha", Old barline Road, Opposite Kalappa compound, Shimoga 577201.
Printed by him at Yogitha Printers, Behind KSRTC Bus stand, Vijaya Rice Mill Building, Budha Nagar, Shimoga 577201.